ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೬೮

# ಪಟ್ಟಿ – ೦೧

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೈದನೆಯ ಅಧಿವೇಶನ

**ಸೋಮವಾರ, ದಿನಾಂಕ : ೦೯ನೇ ಜುಲೈ, ೨೦೧೮.**

---

## ಸಮೂಹ – I

೧. ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು.

೩. ಸಾರಿಗೆ ಸಚಿವರು.

೪. ಸಣ್ಣ ನೀರಾವರಿ ಸಚಿವರು.

೫. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

---

## ಯೂನಿವರ್ಸಲ್ ಹೆಲ್ತ್ ಸ್ಕೀಂ ಯೋಜನೆ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೧ (೫೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಯೂನಿವರ್ಸಲ್ ಹೆಲ್ತ್ ಸ್ಕೀಂ ಜಾರಿಗೆ ಬಂದಿದೆಯೇ ; (ಈ ಯೋಜನೆಯ ಸಂಪೂರ್ಣ ವಿವರ ನೀಡುವುದು)

(ಆ) ಅನುದಾನಿತ ಹಾಗೂ ಅನುದಾನರಹಿತ ಶಾಲಾ ಕಾಲೇಜುಗಳ ಸಿಬ್ಬಂದಿಗಳಿಗೂ ಈ ಯೋಜನೆ ಅನ್ವಯಿಸುತ್ತದೆಯೇ ;

(ಇ) ಈ ಯೋಜನೆ ಆರಂಭವಾದ ನಂತರ ಹಿಂದಿನ ಯಾವ ಯಾವ ಯೋಜನೆಗಳನ್ನು ರದ್ದುಗೊಳಿಸಲಾಗಿದೆ ? (ವಿವರ ನೀಡುವುದು)

## ಮದ್ದೂರು– ದಾವಣಗೆರೆಗೆ K.S.R.T.C ಬಸ್ ಸಂಚರಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨ (೪೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮದ್ದೂರು K.S.R.T.C ಘಟಕದಿಂದ ಮಾರ್ಗ ಸಂಖ್ಯೆ ೧೦೨–೧೦೩ ಮದ್ದೂರು, ಕೊಪ್ಪ, ಕೌಡ್ಲೆ–ದೇವಲಾಪುರ, ನಾಗಮಂಗಲ, ತುರುವೇಕೆರೆ ಮಾರ್ಗವಾಗಿ ಕಡೂರು, ಬೀರೂರು–ಭದ್ರಾವತಿ, ಹರಿಹರ–ದಾವಣಗೆರೆ ಮಾರ್ಗವಾಗಿ ಬಸ್ಸು ಸಂಚರಿಸುತ್ತಿದ್ದು ಈ ಮಾರ್ಗವಾಗಿ ದಿನಕ್ಕೆ ₹. ೧೮ ರಿಂದ ೨೫

ಸಾವಿರದಷ್ಟು ಸಂಸ್ಥೆಗೆ ಆದಾಯ ಬರುತ್ತಿದ್ದ ಬಸ್ಸು ಮಾರ್ಗವನ್ನು ರದ್ದು ಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಮಾರ್ಗವನ್ನು ರದ್ದುಗೊಳಿಸಿರುವುದರಿಂದ ಮದ್ದೂರು, ಕೊಪ್ಪ, ಕೌಡ್ಲೆ–ದೇವಲಾಪುರ, ನಾಗಮಂಗಲದ ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅನಾನುಕೂಲವಾಗಿದ್ದು, ಈ ಮಾರ್ಗ ಸಂಖ್ಯೆ ೧೦೨–೧೦೩ ಅನ್ನು ಯಾವಾಗಲಿಂದ ಪ್ರಾರಂಭಿಸಲಾಗುವುದು ;

(ಇ) ಕೊಪ್ಪ ಹೋಬಳಿ, ಮಂಡ್ಯ– ಅರಗಿನಮೇಳೆ ಗ್ರಾಮಕ್ಕೆ ಬಸ್ಸಿನ ಸಂಚಾರವಿಲ್ಲದೇ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಮಂಡ್ಯ–ಅರಗಿನಮೇಳೆ ಗ್ರಾಮಗಳಿಗೆ ಯಾವಾಗಲಿಂದ ಬಸ್ಸು ಸಂಚರಿಸಲು ಕ್ರಮವಹಿಸಲಾಗುವುದು ?

## ಮದ್ದೂರು ತಾಲ್ಲೂಕು, ಕೊಪ್ಪ K.S.R.T.C ಬಸ್ ನಿಲ್ದಾಣದ ಆವರಣ ಅಭಿವೃದ್ಧಿ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩ (೪೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮದ್ದೂರು ತಾಲ್ಲೂಕಿನ ಕೊಪ್ಪ K.S.R.T.C ಬಸ್ ನಿಲ್ದಾಣದ ಮುಂಭಾಗದ ಆವರಣವು ಮಳೆಗಾಲದಲ್ಲಿ ಕೆಸರುಗದ್ದೆಯಂತೆ ಆಗುತ್ತಿರುವುದರಿಂದ ಪ್ರಯಾಣಿಕರಿಗೆ ಹಾಗೂ ಬಸ್ಸುಗಳು ಸಂಚರಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಆವರಣಕ್ಕೆ ಸಿಮೆಂಟ್ ಕಾಂಕ್ರಿಟ್ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಸದರಿ ಬಸ್ ನಿಲ್ದಾಣ RCC ಚಾವಣಿ ತುಂಬ ಚಿಕ್ಕದಾಗಿರುವುದರಿಂದ ಮಳೆಗಾಲದಲ್ಲಿ ಪ್ರಯಾಣಿಕರಿಗೆ ತೊಂದರೆಯಾಗುತ್ತಿದ್ದು RCC ಚಾವಣಿಯನ್ನು ವಿಸ್ತರಿಸಿ ಅನುಕೂಲ ಮಾಡಲಾಗುವುದೇ ?

## ಕೆರೆ ಜೀರ್ಣೋದ್ಧಾರ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪ (೫೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಕೊಪ್ಪ ಹೋಬಳಿಯ ಬೋಳಾರೆಕೆರೆಯು ಸುಮಾರು ೪೫೨ ಎಕರೆಗಳಾಗಿದ್ದು ಈ ಕೆರೆಯನ್ನು ಜೀರ್ಣೋದ್ಧಾರ ಮತ್ತು ಅಭಿವೃದ್ಧಿಗೊಳಿಸಲು ₹. ೨೯.೫೦ ಲಕ್ಷ ಅನುಮೋದನೆಯಾಗಿ ಮಂಜೂರಾತಿ ನೀಡಲಾಗಿದ್ದರೂ ಇದುವರೆವಿಗೂ ಟೆಂಡರ್ ಕರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಟೆಂಡರ್ ಕರೆಯದೇ ಇರುವುದಕ್ಕೆ ಕಾರಣಗಳೇನು; ಮತ್ತು ಟೆಂಡರ್ ಕರೆಯದೇ ಇರುವ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ; (ಪೂರ್ಣ ಮಾಹಿತಿ ನೀಡುವುದು)

(ಇ) ಶಿಂಷಾ ನದಿಗೆ ಅಡ್ಡಲಾಗಿ ಕುಡುಗುಬಾಳು ಮತ್ತು ಯಡವನಹಳ್ಳಿ ಹತ್ತಿರ ಚೆಕ್‌ಡ್ಯಾಂ ನಿರ್ಮಾಣ ಮಾಡಿ ಇಲ್ಲಿಂದ ಬೋಳಾರೆಕೆರೆಗೆ ಮತ್ತು ವಿ.ಸಿ. ನಾಲಾಗೆ ಸಂಪರ್ಕ ಕಲ್ಪಿಸಿ ಕುಂಠಿತ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಒದಗಿಸುವ ಯೋಜನೆಯನ್ನು ಮಂಜೂರು ಮಾಡದಿರಲು ಕಾರಣವೇನು ? (ಪೂರ್ಣ ಮಾಹಿತಿ ನೀಡುವುದು)

## ಬಹುಗ್ರಾಮ ಶುದ್ಧ ಕುಡಿಯುವ ನೀರಿನ ಯೋಜನೆ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫ (೫೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕಿನ ಆದಿಚುಂಚನಗಿರಿ ಹಾಗೂ ೧೨೮ ಗ್ರಾಮಗಳಿಗೆ ಡಿ.ಬಿ.ಓ.ಟಿ. ಆಧಾರಿತ ಬಹು ಗ್ರಾಮ ಕುಡಿಯುವ ನೀರಿನ ಯೋಜನೆ ಕಾಮಗಾರಿ ಯಾವಾಗ ಮಂಜೂರಾಗಿದೆ ; (ಮಾಹಿತಿ ನೀಡುವುದು)

(ಆ) ಈ ಯೋಜನೆಯ ಕಾಮಗಾರಿಯ ಟೆಂಡರ್‌ನ್ನು ಯಾರಿಗೆ ನೀಡಲಾಗಿದೆ; ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿದ ಟೆಂಡರ್‌ದಾರರ ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು ;

(ಇ) ಈ ಯೋಜನೆಗೆ ಬಿಡುಗಡೆಯಾದ ಮೊತ್ತವೆಷ್ಟು ; ಬಿಡುಗಡೆಯಾಗಬೇಕಾದ ಮೊತ್ತವೆಷ್ಟು ; (ವಿವರ ನೀಡುವುದು)

(ಈ) ಈ ಯೋಜನೆಯ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗಿದೆ; ಈಗ ಕಾಮಗಾರಿ ಯಾವ ಹಂತದಲ್ಲಿದೆ; ಎಷ್ಟು ಕಾಲಮಿತಿಯೊಳಗೆ ಕಾಮಗಾರಿ ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಉ) ಈ ಯೋಜನೆಗೆ ₹. ೬೫ ಕೋಟಿ ಮಂಜೂರಾಗಿದ್ದು, ಸದರಿ ಮೊತ್ತವನ್ನು ₹. ೧೬೫ ಕೋಟಿಗೆ ಹೆಚ್ಚಿಸಿರುವುದು ನಿಜವೇ; ಹೆಚ್ಚಿಸಿದ್ದಲ್ಲಿ, ಇದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಊ) ಈ ಹೆಚ್ಚಳದಿಂದ ಅಕ್ರಮಕ್ಕೆ ದಾರಿ ಮಾಡಿದಂತಾಗುವುದಿಲ್ಲವೆ ? (ಸಂಪೂರ್ಣ ಮಾಹಿತಿ ನೀಡುವುದು)

## ವಿವಿಧ ಯೋಜನೆಗಳ ಹಣವನ್ನು ಬೇರೆ ಬೇರೆ ಬ್ಯಾಂಕ್ ಖಾತೆಗೆ ಜಮಾ ಆಗಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬ (೫೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ವಿವಿಧ ಯೋಜನೆಗಳಿಗೆ ಬಿಡುಗಡೆಯಾದ ಹಣವನ್ನು ಬೇರೆ ಬೇರೆ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಎಷ್ಟು ಕೋಟಿ ಹಣವನ್ನು ಬೇರೆ ಬೇರೆ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಲಾಗಿದೆ ;

(ಇ) ಆರ್.ಡಿ.ಪಿ.ಆರ್. ಇಲಾಖೆಯಲ್ಲಿ ಈ ಅಕ್ರಮ ದಂಧೆಯು ಯಾವಾಗಿನಿಂದ ನಡೆಯುತ್ತಿದೆ; ಇದು ಯಾವಾಗ, ಹೇಗೆ ಬೆಳಕಿಗೆ ಬಂತು; ಇದು ಹೇಗೆ ಬೆಳಕಿಗೆ ಬರಲು ಸಾಧ್ಯವಾಯಿತು ; (ಸಂಪೂರ್ಣ ವಿವರ ನೀಡುವುದು)

(ಈ) ಈ ಅಕ್ರಮ ದಂಧೆಯಲ್ಲಿ ಶಾಮೀಲಾಗಿರುವ ಅಧಿಕಾರಿ/ನೌಕರರು ಯಾರ್ಯಾರು ; (ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಉ) ಈ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಯಾವ ಶಿಸ್ತಿನ ಕ್ರಮ ಕೈಗೊಳ್ಳಲಾಗಿದೆ; ತಪ್ಪಿತಸ್ಥ ಅಧಿಕಾರಿಗಳ ಆಸ್ತಿ ವಿವರ ನೀಡುವುದು ;

(ಊ) ಅಕ್ರಮವನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ತುಂಗಭದ್ರ ಪ್ರಾಜೆಕ್ಟ್‌ನಲ್ಲಿರುವ ನೀರಿನ ಸಂಗ್ರಹಣೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೭ (೯೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಂಗಭದ್ರ ಪ್ರಾಜೆಕ್ಟ್‌ನಲ್ಲಿ ೩೨ ಟಿ.ಎಂ.ಸಿ. ಹೂಳು ತುಂಬಿರುವುದರಿಂದ ನೀರಿನ ಸಂಗ್ರಹಣೆ ಕಡಿಮೆಯಾಗಿರುವುದನ್ನು ಸರಿದೂಗಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ನಾರಾಯಣಪುರ ಬಲದಂಡೆ ಕಾಲುವೆ (NRBC) ಪೂರ್ಣ ಪ್ರಮಾಣದ ಕಾಲುವೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ನಾರಾಯಣಪುರ ಬಲದಂಡೆ ಕಾಲುವೆಯ ಉಪಕಾಲುವೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಮಾನ್ವಿ ನಗರದಲ್ಲಿರುವ NEKSRTC ಬಸ್ಸು ಡಿಪೋ ನಿರ್ಮಾಣದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೮ (೯೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ವಿ ನಗರದಲ್ಲಿರುವ NEKSRTC ಬಸ್ಸು ಡಿಪೋ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ನೂತನ ಸಿರವಾರ ತಾಲ್ಲೂಕಿನಲ್ಲಿ ನೂತನ ಬಸ್ಸು ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ತೆಗದುಕೊಂಡ ಕ್ರಮವೇನು ?

## ರಾಯಚೂರು ನಗರದಲ್ಲಿರುವ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಅಭಿವೃದ್ಧಿಯ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯ (೯೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನಗರದಲ್ಲಿರುವ ರಾಜೀವ್‌ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿ ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮವೇನು ;

(ಆ) ಡಾ॥ ನಂಜುಂಡಪ್ಪ ವರದಿ ಪ್ರಕಾರ ಅತ್ಯಂತ ಹಿಂದುಳಿದ ರಾಯಚೂರು ಜಿಲ್ಲೆಯಲ್ಲಿನ ಸದರಿ ಆಸ್ಪತ್ರೆಯ ಸುಧಾರಣೆಗಳಿಗಾಗಿ ಹೆಚ್ಚಿನ ಅನುದಾನ ನೀಡಿ ಆದ್ಯತೆ ಮೇರೆಗೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದೇ ;

(ಇ) ಸದರಿ ಆಸ್ಪತ್ರೆಗೆ ಮಂಜೂರಾದ ಒಟ್ಟು ಹುದ್ದೆಗಳು ಎಷ್ಟು; ಪ್ರಸ್ತುತ ಖಾಲಿ ಇರುವ ಹುದ್ದೆಗಳೆಷ್ಟು ; (ವಿವರಗಳನ್ನು ನೀಡುವುದು)

(ಈ) ಸದರಿ ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

## ಮಾನ್ವಿ ಪಟ್ಟಣದಲ್ಲಿರುವ ನ್ಯಾಯಾಲಯದ ಸಂಕೀರ್ಣದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೦ (೯೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ವಿ ಪಟ್ಟಣದ ತಾಲ್ಲೂಕು ನ್ಯಾಯಾಲಯ ಸಂಕೀರ್ಣ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ರಾಯಚೂರು ನಗರದ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಪೂರ್ಣಗೊಳಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು ?

# ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು "ಬಿ" ದರ್ಜೆಗೇರಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೧ (೬೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು "ಬಿ" ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ಹಾಗಿದ್ದಲ್ಲಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು "ಬಿ" ದರ್ಜೆಗೇರಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಇ) ಈ ಹಿಂದಿನ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು "ಬಿ" ದರ್ಜೆಗೇರಿಸಲಾಗುವುದೆಂದು ಹಲವು ಬಾರಿ ಪತ್ರಿಕಾ ಪ್ರಕಟಣೆ ನೀಡಿದ್ದರೂ, ಇದುವರೆಗೂ ಸದರಿ ಹುದ್ದೆಯನ್ನು "ಬಿ" ದರ್ಜೆಗೇರಿಸದಿರುವುದಕ್ಕೆ ಇರುವ ಅಡೆ–ತಡೆಗಳೇನು ; (ವಿವರವಾದ ಮಾಹಿತಿ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು "ಬಿ" ದರ್ಜೆಗೇರಿಸಲಾಗುವುದು ?

## ಬಸ್ ನಿಲ್ದಾಣಗಳಲ್ಲಿ ಮೂಲಸೌಕರ್ಯವನ್ನು ಒದಗಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨ (೬೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಬಸ್ ನಿಲ್ದಾಣಗಳಲ್ಲಿ ಮೂತ್ರಾಲಯ ಮತ್ತು ಶೌಚಾಲಯ ಹಾಗೂ ಸ್ವಚ್ಛತೆ ಕಾಪಾಡಲು ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ;

(ಆ) ಅವುಗಳನ್ನು ಆಧುನೀಕರಣಗೊಳಿಸಲು ಸರ್ಕಾರ ಕಾರ್ಯಕ್ರಮ ಹಾಕಿಕೊಂಡಿದೆಯೇ; ಎಷ್ಟು ದಿನಗಳಲ್ಲಿ ಆಧುನೀಕರಣಗೊಳಿಸಲಾಗುವುದು ;

(ಇ) ಬಸ್ ನಿಲ್ದಾಣಗಳಲ್ಲಿ ಉತ್ತಮ ಗುಣಮಟ್ಟದ ಮತ್ತು ಶುಚಿರುಚಿಯ ಆಹಾರ ಪದಾರ್ಥಗಳನ್ನು ಸಾರ್ವಜನಿಕರಿಗೆ ನೀಡುವಂತಹ ಉಪಹಾರ ಮಂದಿರಗಳನ್ನು ತೆರೆಯುವ ವ್ಯವಸ್ಥೆ ಮಾಡಲಾಗಿದೆಯೇ; ಸ್ವಚ್ಛತೆ ಮತ್ತು ಗುಣಮಟ್ಟವನ್ನು ಪರೀಕ್ಷಿಸಲು ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ?

## ಸರ್ಕಾರಿ ಆಸ್ಪತ್ರೆಗಳಲ್ಲಿ ರಕ್ತ ತಪಾಸಣಾ ಪ್ರಯೋಗಾಲಯಗಳ ಕುರಿತು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩ (೬೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಎಷ್ಟು ಸರ್ಕಾರಿ ಆಸ್ಪತ್ರೆಗಳಲ್ಲಿ ರಕ್ತ ತಪಾಸಣೆ ಪ್ರಯೋಗಾಲಯಗಳಿವೆ ಮತ್ತು ಅಲ್ಲಿ

ನುರಿತ ತಂತ್ರಜ್ಞರು ಇದ್ದಾರೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಎಷ್ಟು ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಹೆಚ್.ಐ.ವಿ. ತಪಾಸಣಾ ಮತ್ತು ಚಿಕಿತ್ಸಾ ಘಟಕಗಳಿವೆ; ಅವುಗಳಲ್ಲಿ ಇದಕ್ಕೆ ಸಂಬಂಧಿಸಿದ ಔಷಧಿಗಳ ಸಂಗ್ರಹಣೆ ವ್ಯವಸ್ಥೆ ಇದೆಯೇ ;

(ಇ) ಸಾರ್ವಜನಿಕರಿಗೆ ರಕ್ತ ತಪಾಸಣೆ, ಹೆಚ್.ಐ.ವಿ. ತಪಾಸಣೆ ಮತ್ತು ಚಿಕಿತ್ಸೆಗಳನ್ನು ಉಚಿತವಾಗಿ ಮಾಡಲಾಗುತ್ತಿದೆಯೇ ?

## ಕಳಪೆ ರಸ್ತೆ ಕಾಮಗಾರಿ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪ (೧೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಅಡಿಕೆ ಹೊಸೂರ ಗ್ರಾಮದಲ್ಲಿ ಅಂದಾಜು ೩ ಕೋಟಿ ವೆಚ್ಚದಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಲ್ಲಿ ಅಡಿಕೆ ಹೊಸೂರು ಗ್ರಾಮ ಸಂಪರ್ಕ ಕಲ್ಪಿಸುವ ಯೋಜನೆಗೆ ಅನುದಾನ ಮಂಜೂರು ಮಾಡಿ ಕಾಮಗಾರಿ ಮಾಡಿದ್ದು ಆ ಕಾಮಗಾರಿ ಕೆಲವೇ ದಿನಗಳಲ್ಲಿಯೇ ಕಿತ್ತು ಹೋಗಿ ಪೂರ್ತಿ ರಸ್ತೆಗಳಲ್ಲಿ ಹೊಂಡ ಬಿದ್ದು, ಮಳೆಗಾಲದಲ್ಲಿ ಓಡಾಡಲು ಸಾಧ್ಯವಾಗದೇ ಗ್ರಾಮಸ್ಥರಿಗೆ ತುಂಬಾ ತೊಂದರೆಯಾಗಿರುವುದರಿಂದ ಕಾಮಗಾರಿ ಮಾಡಿರುವ

ಗುತ್ತಿಗೆದಾರರನ್ನು ಹಾಗೂ ಇದರ ಉಸ್ತುವಾರಿ ವಹಿಸಿರುವ ಅಧಿಕಾರಿಯ ಮೇಲೆ ಸಾರ್ವಜನಿಕರು ಶಿಸ್ತಿನ ಕ್ರಮ ಕೈಗೊಳ್ಳಲು ಆಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಈ ರೀತಿ ರಸ್ತೆ ಕಾಮಗಾರಿಗೆ ಬಂದಿರುವ ಅನುದಾನ ದುರ್ಬಳಕೆ ಮಾಡಿರುವುದಕ್ಕೆ ಯಾರು ಜವಾಬ್ದಾರರು; ಈ ಬಗ್ಗೆ ಸರ್ಕಾರ ಕೂಡಲೇ ವರದಿ ಪಡೆದು ಕಳಪೆ ಕಾಮಗಾರಿ ಮಾಡಿದರೂ ಗಮನಿಸದ ಅಧಿಕಾರಿಯ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಕಳಪೆ ರಸ್ತೆ ಕಾಮಗಾರಿ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫ (೧೦೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಅಡಿಕೆ ಹೊಸೂರ ಗ್ರಾಮದಲ್ಲಿ ಅಂದಾಜು ೩ ಕೋಟಿ ವೆಚ್ಚದಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಲ್ಲಿ ಅಡಿಕೆ ಹೊಸೂರ ಗ್ರಾಮ ಸಂಪರ್ಕ ಕಲ್ಪಿಸುವ ಯೋಜನೆಗೆ ಅನುದಾನ ಮಂಜೂರು ಮಾಡಿ ಕಾಮಗಾರಿ ಮಾಡಿದ್ದು, ಮಾಡಿರುವ ಕಾಮಗಾರಿ ಕೆಲವೇ ದಿನಗಳಲ್ಲಿಯೇ ಕಿತ್ತು ಹೋಗಿ ಪೂರ್ತಿ ರಸ್ತೆಗಳಲ್ಲಿ ಹೊಂಡ ಬಿದ್ದು, ಈ ಮಳೆಗಾಲದಲ್ಲಿ ಓಡಾಡಲು ಸಾಧ್ಯವಾಗದೇ ಗ್ರಾಮಸ್ಥರಿಗೆ

ತುಂಬಾ ತೊಂದರೆಯಾಗಿರುವುದರಿಂದ ಕಾಮಗಾರಿ ಮಾಡಿರುವ ಗುತ್ತಿಗೆದಾರರನ್ನು ಹಾಗೂ ಇದರ ಉಸ್ತುವಾರಿ ವಹಿಸಿರುವ ಅಧಿಕಾರಿಯ ಮೇಲೆ ಸಾರ್ವಜನಿಕರು ಶಿಸ್ತಿನ ಕ್ರಮ ಕೈಗೊಳ್ಳಲು ಆಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಈ ರೀತಿ ರಸ್ತೆ ಕಾಮಗಾರಿಗೆ ಬಂದಿರುವ ಅನುದಾನ ದುರ್ಬಳಕೆ ಮಾಡಿರುವುದಕ್ಕೆ ಯಾರು ಜವಾಬ್ದಾರರು ; ಈ ಬಗ್ಗೆ ಸರ್ಕಾರ ಕೂಡಲೇ ವರದಿ ತರಿಸಿ ಕಳಪೆ ಕಾಮಗಾರಿ ಮಾಡಿದರೂ ಗಮನಿಸದ ಅಧಿಕಾರಿ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳುವುದೇ ?

## ದೇವಿಕೇರಿಯ ಪಿಂಚಿಂಗ್ ಕಾಮಗಾರಿಯಲ್ಲಿ ಅವ್ಯವಹಾರ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬ (೧೦೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಶಿರಸಿ ನಗರದ ಹೃದಯ ಭಾಗದಲ್ಲಿರುವ ದೇವಿಕೆರೆಯ ಪಿಂಚಿಂಗ್ ಕಾಮಗಾರಿ ಕುಸಿದು ಮಣ್ಣು ಕೆರೆ ಪಾಲಾಗಿರುವುದರಿಂದ ಲಕ್ಷಾಂತರ ರೂಪಾಯಿ ವೆಚ್ಚದಿಂದ ಮಾಡಿರುವ ಈ ಕಾಮಗಾರಿ ಸ್ವಲ್ಪ ದಿನಗಳಲ್ಲೇ ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ಸದರಿ ಅಭಿವೃದ್ಧಿ ಕಾಮಗಾರಿ ಲ್ಯಾಂಡ್ ಆರ್ಮಿ ಮುಖಾಂತರ ಮಾಡಿದ್ದು, ಸಂಬಂಧಿಸಿದವರು ಪ್ರತಿಯೊಂದು ಕಾಮಗಾರಿಯಲ್ಲೂ

ಕೂಡಾ ಕಳಪೆ ಮಟ್ಟದ ಕಾಮಗಾರಿ ಮಾಡುತ್ತಿರುವುದರಿಂದ ಜಿಲ್ಲೆಯಲ್ಲಿ ಇವರು ಮಾಡಿರುವ ಎಲ್ಲಾ ಅಭಿವೃದ್ಧಿ ಕೆಲಸ ಕಾರ್ಯಗಳು ನಿಷ್ಪ್ರಯೋಜಕ ಆಗಿರುವುದು ನಿಜವೇ ;

(ಇ) ಹಾಗಿದ್ದಲ್ಲಿ ಇವರು ಕಳೆದ ೩ ವರ್ಷದ ಹಿಂದಿನಿಂದ ಇಲ್ಲಿಯವರೆಗೆ ಮಾಡಿರುವ ಪ್ರತಿಯೊಂದು ಕಾಮಗಾರಿಗಳ ವಿವರ ಪಡೆದು ಸ್ಥಳ ಪರಿಶೀಲನೆ ಮಾಡಿ ಆಗಿರುವ ಅವ್ಯವಹಾರಕ್ಕೆ ಸಂಬಂಧಿಸಿದ ಅಧಿಕಾರಿಗಳನ್ನು ಹೊಣೆ ಮಾಡಿ ಅವರ ಮೇಲೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ತಾಲ್ಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾಮಗಾರಿಯ ಅನುದಾನ ದುರ್ಬಳಕೆ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭ (೧೦೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಯಲ್ಲಾಪೂರ ತಾಲ್ಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಬಂದ ಅನುದಾನದಲ್ಲಿ ತುಂಡು ಗುತ್ತಿಗೆ ಮೂಲಕ ಕಾಮಗಾರಿ ಹಂಚಿಕೆ ಮಾಡಿರುವಲ್ಲಿ ಸುಮಾರು ೭ ಕೋಟಿ ರೂಪಾಯಿ ಅನುದಾನದ ಅವ್ಯವಹಾರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ಯಲ್ಲಾಪೂರ ತಾಲ್ಲೂಕಿಗೆ ಅಭಿವೃದ್ಧಿ ಕಾಮಗಾರಿ ಕುರಿತು ತಾಲ್ಲೂಕು ಪಂಚಾಯಿತಿಗೆ ಬಂದಿರುವ ಅತೀ ಹೆಚ್ಚಿನ ಮೊತ್ತ ಇದಾಗಿರುವುದರಿಂದ ಸದರಿ ಅನುದಾನದಲ್ಲಿ ಮಾಡಿರುವ

ಕಾಮಗಾರಿಯನ್ನು ನಿಯಮಾವಳಿ ಪ್ರಕಾರ ಮಾಡಲಾಗಿದೆಯೇ; ವಿವರ ನೀಡುವುದು ? (ಪ್ರತಿಯೊಂದು ಕಾಮಗಾರಿಗೆ ಹಂಚಿಕೆ ಮಾಡಿದ ಅನುದಾನ, ಕಾಮಗಾರಿ ಮಾಡಿದ ಗುತ್ತಿಗೆದಾರರ ಹೆಸರು, ಸವಿಸ್ತಾರ ವರದಿ ನೀಡುವುದು)

## ಗ್ರಾಮೀಣ ಭಾಗದಲ್ಲಿ ಸಾರಿಗೆ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮ (೮೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ವತಿಯಿಂದ ಗ್ರಾಮೀಣ ಸಾರಿಗೆ ಸೌಲಭ್ಯ ಇಲ್ಲದಿರುವುದರಿಂದ ವಿದ್ಯಾರ್ಥಿಗಳು, ರೈತರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅವರುಗಳಿಗೆ ಆಗುತ್ತಿರುವ ತೊಂದರೆಗಳನ್ನು ತಪ್ಪಿಸಲು ಸರ್ಕಾರ ತ್ವರಿತವಾಗಿ ಗ್ರಾಮೀಣ ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು ;

(ಇ) ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಗ್ರಾಮೀಣ ಸಾರಿಗೆ ಸೌಲಭ್ಯವನ್ನು ಕಲ್ಪಿಸಲು ಸರ್ಕಾರ ಸಮೀಕ್ಷೆ ನಡೆಸಿದೆಯೇ; ಹಾಗಿದ್ದಲ್ಲಿ, ಗ್ರಾಮೀಣ ಸಾರಿಗೆ ಸೌಲಭ್ಯ ಕಲ್ಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು ?

# ಎತ್ತಿನ ಹೊಳೆ ಯೋಜನೆ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯ (೮೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎತ್ತಿನಹೊಳೆ ಯೋಜನೆಗಾಗಿ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಎಕರೆ ಜಮೀನುಗಳನ್ನು ಸರ್ಕಾರವು ಸ್ವಾಧೀನಕ್ಕೆ ಪಡೆದಿದೆ ; ಈ ಯೋಜನೆಗಾಗಿ ಜಮೀನು ಕಳೆದುಕೊಂಡವರಿಗೆ ಸರ್ಕಾರವು ನಿಗದಿಪಡಿಸಿರುವ ಪರಿಹಾರದ ಮೊತ್ತವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಎತ್ತಿನಹೊಳೆ ಯೋಜನೆಗಾಗಿ ಹೆಗ್ಗದ್ದೆ ಬಳಿಯ ಮಾರನಹಳ್ಳಿಯಲ್ಲಿ ಚೆಕ್‌ಡ್ಯಾಂ ನಿರ್ಮಾಣ ಮಾಡಲು ಡೈನಾಮೇಟ್ ಸಿಡಿಸಿದ ಪರಿಣಾಮ ಹಾನಿಗೊಳಗಾದ ಮನೆಗಳೆಷ್ಟು ; ಹಾನಿಗೊಳಗಾದ ಮನೆಗಳ ಮಾಲೀಕರಿಗೆ ಪರಿಹಾರ ನೀಡಲಾಗಿದೆಯೇ ; ಪರಿಹಾರ ನೀಡಿದ್ದಲ್ಲಿ, ಅದರ ಸಂಪೂರ್ಣ ವಿವರ ನೀಡುವುದು ;

(ಇ) ಈ ಯೋಜನೆಯಿಂದಾಗಿ ಸಕಲೇಶಪುರ ತಾಲ್ಲೂಕಿನಲ್ಲಿ ನಾಶವಾದ ಮರಗಳೆಷ್ಟು ; ಅರಣ್ಯ ನಾಶದ ಬದಲಿಗೆ ಈ ಭಾಗದಲ್ಲಿ ೨೦೧೬–೧೭ ಮತ್ತು ೨೦೧೭–೧೮ನೇ ಸಾಲುಗಳಲ್ಲಿ ಎಷ್ಟು ಮರಗಳನ್ನು ನೆಡಲಾಗಿದೆ ಮತ್ತು ಎಲ್ಲೆಲ್ಲಿ ನೆಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦ (೮೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಿಂದ ಇಲ್ಲಿಯವರೆಗೆ ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಮಂಜೂರು ಮಾಡಲಾಗಿದೆ ; ಈ ಘಟಕಗಳಿಗೆ ಬಿಡುಗಡೆ ಮಾಡಲಾಗಿರುವ ಅನುದಾನವೆಷ್ಟು ; (ಘಟಕವಾರು ವಿವರ ನೀಡುವುದು)

(ಆ) ಅನುಷ್ಠಾನಗೊಂಡಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ ಹೇಗೆ ಮಾಡಲಾಗುತ್ತಿದೆ ; ಅನುಷ್ಠಾನಗೊಂಡ ಎಲ್ಲಾ ಘಟಕಗಳು ಸುಸ್ಥಿತಿಯಲ್ಲಿವೆಯೇ ; ದುರಸ್ಥಿಗೊಂಡಿದ್ದಲ್ಲಿ, ಅಂತಹ ದುರಸ್ಥಿಗೊಂಡ ಘಟಕಗಳ ವಿವರ ನೀಡುವುದು ;

(ಇ) ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರಕ್ಕೆ ಅವಶ್ಯಕವಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಎಷ್ಟು ಘಟಕಗಳನ್ನು ಮತ್ತು ಯಾವಾಗ ಮಂಜೂರು ಮಾಡಲಾಗುವುದು ?

## ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರ ಅಭಾವದ ಕುರಿತು

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧ (೮೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರು, ಕಿರಿಯ ಆರೋಗ್ಯ ಸಹಾಯಕ ಮತ್ತು ಸಹಾಯಕಿಯರಿಲ್ಲದೇ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಮಂಜೂರಾಗಿರುವ, ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ವೈದ್ಯರು, ಕಿರಿಯ ಆರೋಗ್ಯ ಸಹಾಯಕ ಮತ್ತು ಸಹಾಯಕಿಯರ ಹುದ್ದೆಗಳು ಎಷ್ಟು; (ಆಸ್ಪತ್ರೆವಾರು/ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಇ) ಖಾಲಿ ಇರುವ ವೈದ್ಯರು, ಕಿರಿಯ ಆರೋಗ್ಯ ಸಹಾಯಕ ಮತ್ತು ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ ; ಹಾಗಿದ್ದಲ್ಲಿ, ಯಾವಾಗ ಭರ್ತಿ ಮಾಡಲಾಗುವುದು ?

## ರಾಜ್ಯದಲ್ಲಿ ೨೦೧೬–೧೭ & ೨೦೧೭–೧೮ರಲ್ಲಿ ಗ್ರಾಮೀಣ ವಿಕಾಸ ಯೋಜನೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೨ (೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೬–೧೭ ಮತ್ತು ೨೦೧೭–೧೮ರಲ್ಲಿ ಒಟ್ಟು ಎಷ್ಟು ಗ್ರಾಮೀಣ ವಿಕಾಸ ಯೋಜನೆಯನ್ನು ಮಂಜೂರು ಮಾಡಲಾಗಿದೆ;

ಈ ಯೋಜನೆಯ ಮಂಜೂರಾತಿಗೆ ಯಾವ ಮಾನದಂಡ ಇಟ್ಟುಕೊಳ್ಳಲಾಗಿದೆ ; (ವಿವರ ಒದಗಿಸುವುದು)

(ಆ) ಗ್ರಾಮೀಣ ವಿಕಾಸ ಯೋಜನೆ ಪೂರ್ತಿಗೊಳ್ಳಲು ಇಲಾಖೆ ವಿಧಿಸಿರುವ ಅವಧಿ ಎಷ್ಟು ; ವಿಳಂಬ ಆಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ಒದಗಿಸುವುದು)

(ಇ) ಸರ್ಕಾರದ ಮಂಜೂರಾದ ಕಾಮಗಾರಿ ಕೈಗೊಳ್ಳುವಾಗ ಪಂಚಾಯತ್‌ಗಳಿಂದ ನಿರಾಕ್ಷೇಪಣಾ ಪತ್ರ ಪಡೆಯಲೇ ಬೇಕೆನ್ನುವುದು ಕಡ್ಡಾಯವೇ ; ಸರ್ಕಾರದ ಯೋಜನೆ ಜಾರಿಗೆ ತರಲು ಗ್ರಾಮ ಪಂಚಾಯತ್ ಸಹಕಾರ ನೀಡದೆ ಇದ್ದಲ್ಲಿ ಇಲಾಖೆ ಮುಂದಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಈ) ೨೦೧೫-೧೬, ೨೦೧೬-೧೭, ೨೦೧೭-೧೮ರಲ್ಲಿ ರಾಜ್ಯದಲ್ಲಿ ಕುಡಿಯುವ ನೀರಿಗಾಗಿ ಮೀಸಲಿಟ್ಟ ಅನುದಾನ ಎಷ್ಟು ; ಅನುದಾನ ಸಂಪೂರ್ಣವಾಗಿ ವಿನಿಯೋಗ ಆಗಿದೆಯೇ ; ಆಗದೇ ಇದ್ದಲ್ಲಿ ಕಾರಣಗಳೇನು ? (ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಕಾನೂನು ಕಾಲೇಜುಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೩ (೨೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿರುವ ಸರ್ಕಾರಿ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು ; ಎಷ್ಟು ವಿದ್ಯಾರ್ಥಿಗಳು ೨೦೧೬-೧೭, ೨೦೧೭-೧೮ರಲ್ಲಿ ಪ್ರವೇಶ ಪಡೆದಿದ್ದಾರೆ ;

(ಆ) ರಾಜ್ಯದಲ್ಲಿ ಕಾನೂನು ವಿಶ್ವವಿದ್ಯಾನಿಲಯಗಳು ಯಾವುದೇ ಮೂಲಭೂತ ಸೌಕರ್ಯಗಳಿಲ್ಲದೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಇಲಾಖೆ ಕೈಗೊಂಡಿರುವ ಕ್ರಮಗಳೇನು ; ವಿಶ್ವ ವಿದ್ಯಾನಿಲಯದಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ನ್ಯಾಶನಲ್ ಲಾ ಸ್ಕೂಲ್ ಮಾದರಿಯಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ಸಂಸ್ಥೆಗಳನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಈ) ರಾಜ್ಯದಲ್ಲಿ ಕಾನೂನು ಶಿಕ್ಷಣ ಓದುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು) ; ಕಾನೂನು ಪದವೀಧರರಿಗೆ ಉದ್ಯೋಗ ಮತ್ತು ನ್ಯಾಯಾಲಯಗಳಲ್ಲಿ ವಾದಿಸಲು ತರಬೇತಿಗಳನ್ನು ನೀಡಲಾಗುತ್ತಿದೆಯೇ ; ರಾಜ್ಯದಲ್ಲಿ ಕಾನೂನು ಶಿಕ್ಷಣದ ಬೇಡಿಕೆ ಬಗ್ಗೆ ಇಲಾಖೆ ಚರ್ಚೆ ನಡೆಸಿದೆಯೇ ?

## ಪಶ್ಚಿಮ ವಾಹಿನಿ ಯೋಜನೆಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೪ (೨೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶ್ಚಿಮ ವಾಹಿನಿ ಯೋಜನೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಯೋಜನೆಗಳ ವಿವರ ಒದಗಿಸುವುದು ; ಪ್ರಸ್ತುತ ಕಾಮಗಾರಿಗಳು ಯಾವ ಹಂತದಲ್ಲಿದೆ ;

(ಆ) ಈ ಯೋಜನೆ ಎಷ್ಟು ವರ್ಷಗಳಲ್ಲಿ ಪೂರ್ಣಗೊಳ್ಳುವುದು ; ಮೀಸಲಿಟ್ಟ ಒಟ್ಟು ಅನುದಾನ ಎಷ್ಟು ; ಯೋಜನೆಯನ್ನು ಕಾರ್ಯಗತಗೊಳಿಸಲು ಪ್ರತ್ಯೇಕ ಏಜೆನ್ಸಿಯನ್ನು ನೇಮಿಸಲಾಗಿದೆಯೇ; (ವಿವರ ಒದಗಿಸುವುದು)

(ಇ) ಈ ಯೋಜನೆಗಳ ಪ್ರಮುಖ ಆದ್ಯತೆ ಯಾವುದು ; ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ಸಂಪೂರ್ಣ ವಿವರ ಒದಗಿಸುವುದು)

(ಈ) ಪಶ್ಚಿಮ ವಾಹಿನಿ ಯೋಜನೆ ಮತ್ತು ಎತ್ತಿನಹೊಳೆ ಯೋಜನೆಗೆ ಇರುವ ವ್ಯತ್ಯಾಸ ಏನು ; ಪಶ್ಚಿಮ ವಾಹಿನಿ ಯೋಜನೆಯಿಂದ ಕುಡಿಯುವ ನೀರಿನ ಯೋಜನೆಗಳನ್ನು ಕೈಗೊಳ್ಳಲಾಗುತ್ತಿದೆಯೇ? (ವಿವರ ಒದಗಿಸುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹವಾ ನಿಯಂತ್ರಿತ ಬಸ್ಸುಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೫ (೨೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು, ಉಡುಪಿ, ಮಣಿಪಾಲ ಮತ್ತು ಕುಂದಾಪುರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹವಾ ನಿಯಂತ್ರಿತ ಬಸ್ಸುಗಳ ಆದಾಯ ಲಾಭಕರವಾಗಿದೆಯೇ ; ಎಷ್ಟು ಬಸ್ಸು ಪ್ರಾರಂಭಿಸಲಾಗಿದೆ ; ಪ್ರಸ್ತುತ ಎಷ್ಟು ಬಸ್ಸು ಕಾರ್ಯನಿರ್ವಹಿಸುತ್ತಿದೆ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ನರ್ಮ್ ಯೋಜನೆ ಅನ್ವಯ ನಗರ ಸಾರಿಗೆ ಬಸ್ಸುಗಳನ್ನು ಪ್ರಾರಂಭಿಸದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಇ) ಮಂಗಳೂರು ನಗರದಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ಸು ನಿಲ್ದಾಣಗಳಿಗೆ ಸ್ಥಳಾವಕಾಶದ ಅಭಾವ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸ್ಥಳಾವಕಾಶದ ನಿವಾರಣೆಗೆ ಇಲಾಖೆಯ ಮುಂದೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ;

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಕಾಂಟ್ರೇಕ್ಟ್ ಬಸ್ಸುಗಳಿಗೆ ಪರವಾನಿಗೆ ನೀಡಲಾಗಿದೆ ; ಯಾವ ವರ್ಷದಲ್ಲಿ ಪರವಾನಿಗೆ ನೀಡಲಾಗಿದೆ; ಯಾವ ಉದ್ದೇಶಕ್ಕಾಗಿ ನೀಡಲಾಗಿದೆ ; ಪ್ರಸ್ತುತ ಎಷ್ಟು ಬಸ್ಸುಗಳು ಕಾರ್ಯನಿರ್ವಹಿಸುತ್ತಿವೆ ; ಇದರಿಂದ ಸರ್ಕಾರಕ್ಕೆ ಬರುವ ಆದಾಯ ಎಷ್ಟು ? (ವಿವರ ನೀಡುವುದು)

## ನೀರಿನ ತೊಟ್ಟಿಗಳನ್ನು ನಿರ್ಮಿಸುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬ (೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಚಿತ್ರದುರ್ಗ ಜಿಲ್ಲೆಯಲ್ಲಿ ಅಂತರ್‌ಜಲ ಕಡಿಮೆಯಾಗಿದ್ದು, ಎನ್.ಆರ್.ಇ.ಜಿ. ಯೋಜನೆಯಡಿ ಕೃಷಿ ಜಮೀನುಗಳಲ್ಲಿ ನೀರು ಶೇಖರಣೆಗೆ ನೀರಿನ ತೊಟ್ಟಿಗಳನ್ನು ನಿರ್ಮಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ ನೀರಿನ ತೊಟ್ಟಿಗಳನ್ನು ನಿರ್ಮಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ? (ವಿವರ ನೀಡುವುದು)

## ಅಂತರ್ಜಲ ಮಟ್ಟ ಹೆಚ್ಚಿಸುವ ಬಗ್ಗೆ

**ಶ್ರೀಮತಿ ಜಯಮ್ಮ ಬಾಲರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭ (೪೪) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಜಿಲ್ಲೆ, ಚಳ್ಳಕೆರೆ ತಾಲ್ಲೂಕು ನಾಯಕನಹಟ್ಟಿ ಮತ್ತು ತಳಕ ಹೋಬಳಿಗಳಲ್ಲಿ ಅಂತರ್ಜಲ ಮಟ್ಟ ತೀವ್ರ ಕುಸಿತವಾಗಿದ್ದು, ಕುಡಿಯುವ ನೀರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಂತರ್ಜಲ ಮಟ್ಟ ಹೆಚ್ಚಿಸಲು ಸರದಿ ಚೆಕ್‌ಡ್ಯಾಂಗಳನ್ನು ನಿರ್ಮಾಣ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಇದ್ದಲ್ಲಿ, ೨೦೧೮–೧೯ನೇ ಸಾಲಿನ ಯೋಜನೆಯಲ್ಲಿ ಸದರಿ ಕಾಮಗಾರಿಗಳನ್ನು ಸೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

## ಗ್ರಾಮ ಪಂಚಾಯತ್ ಹುದ್ದೆಗಳ ಸಂಖ್ಯೆ ಹೆಚ್ಚಳ ಮತ್ತು ಪಿ.ಡಿ.ಓ. ಹುದ್ದೆ ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮ (೧೦೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತ್‌ಗಳಿಂದ ಅನುಷ್ಠಾನಗೊಳ್ಳುತ್ತಿರುವ ಉಸ್ತುವಾರಿ ಮಾಡುತ್ತಿರುವ ಕಾರ್ಯಕ್ರಮ ಯೋಜನೆಗಳಾವುವು ; ಇತರ

ಪ್ರಕಾರ್ಯಗಳಾವುವು ; (ಸಂಪೂರ್ಣ ವಿವರ ನೀಡುವುದು) ಅವುಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯಕ್ರಮಗಳು ಮತ್ತು ಅನ್ಯ ಇಲಾಖೆಯ ಕಾರ್ಯಕ್ರಮಗಳಾವುವು ;

(ಆ) ಗ್ರಾಮ ಪಂಚಾಯತ್‌ಗಳಿಗೆ ಮಂಜೂರಾದ ಖಾಯಂ ಹುದ್ದೆಗಳಾವುವು ; ಸದರಿ ಹುದ್ದೆಗಳಿಗೆ ನೀಡುತ್ತಿರುವ ವೇತನ ಮತ್ತು ಇತರೆ ಸೌಲಭ್ಯಗಳೇನು ;

(ಇ) ಗ್ರಾಮ ಪಂಚಾಯತ್‌ನ ಕಡಿಮೆ ಸಿಬ್ಬಂದಿಯಿಂದ ಇಷ್ಟೊಂದು ಯೋಜನೆ, ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನ ಮಾಡಲು ಸಾಧ್ಯವೆ ; ಇಷ್ಟೊಂದು ಕಡಿಮೆ ಸಿಬ್ಬಂದಿಗೆ ಕರ್ತವ್ಯ ನಿರ್ವಹಿಸಲಾಗದಿರುವಷ್ಟು ಒತ್ತಡ ಸೃಷ್ಠಿಯಾಗಿರುವುದು ನಿಜವೆ;

(ಈ) ಇಲಾಖೆಯ ಕಾರ್ಯಕ್ರಮ ಸಮರ್ಪಕವಾಗಿ ಅನುಷ್ಠಾನಗೊಳಿಸಲು ಗ್ರಾಮ ಪಂಚಾಯತ್‌ಗಳ ಸಿಬ್ಬಂದಿ ಸಂಖ್ಯೆಗಳನ್ನು ಹೆಚ್ಚು ಮಾಡಲು ಪ್ರತಿ ಗ್ರಾಮ ಪಂಚಾಯತ್‌ಗಳಿಗೆ ಲೆಕ್ಕ ಸಹಾಯಕರು ನೀಡಲು ಆರ್ಥಿಕ ಇಲಾಖೆಯಲ್ಲಿ ಬಾಕಿಯಿರುವ ಪ್ರಸ್ತಾವನೆಗಳಾದ ತಾಲ್ಲೂಕು ಮಟ್ಟದಲ್ಲಿ ವಿವಿಧ ಯೋಜನೆಗಳಿಗೆ ಹೆಚ್ಚುವರಿ ಸಹಾಯಕ ನಿರ್ದೇಶಕ ಮತ್ತು ಗ್ರಾಮೀಣಾಭಿವೃದ್ಧಿ ಅಧಿಕಾರಿ (ಆರ್.ಡಿ.ಓ) ಹುದ್ದೆ ಸೃಜನೆಯ ಅವಶ್ಯಕತೆಯನ್ನು ಸರ್ಕಾರ ಗಮನಿಸಿದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು ;

(ಉ) ಅನೇಕ ಆರ್ಥಿಕ ಮತ್ತು ಆಡಳಿತಾತ್ಮಕ ಜವಾಬ್ದಾರಿಯನ್ನು ನಿರ್ವಹಿಸುವ ಗ್ರಾಮ ಪಂಚಾಯತ್‌ಗಳಲ್ಲಿನ ಪಿ.ಡಿ.ಓ. ಹುದ್ದೆಯನ್ನು ಗ್ರೂಪ್ “ಬಿ” ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಕಳೆದ ಒಂದೂವರೆ ವರ್ಷದಿಂದ ಬಾಕಿಯಿರಲು ಕಾರಣವೇನು ; ಸರ್ಕಾರ ಈ ಬಗ್ಗೆ ಯಾವ ರೀತಿ ಕ್ರಮ ಕೈಗೊಳ್ಳಲಿದೆ ;

(ಊ) ಹೆಚ್ಚುವರಿ ಹುದ್ದೆ ಸೃಜನೆ, ಖಾಲಿ ಹುದ್ದೆಗಳ ಭರ್ತಿ, ತಾಲ್ಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್‌ನಲ್ಲಿ ಅನ್ಯ ಇಲಾಖೆ ಅಧಿಕಾರಿಗಳ ಪ್ರಭಾರ ನಿಲ್ಲಿಸಿ ನೇರ ನೇಮಕಾತಿಯಲ್ಲಿ ಭರ್ತಿ ಮಾಡುವುದು ಸೇರಿದಂತೆ ಇಲಾಖೆಯಲ್ಲಿನ ಕಾರ್ಯಕ್ರಮಗಳ ಅನುಷ್ಠಾನವನ್ನು ವ್ಯವಸ್ಥಿತವಾಗಿ ನಿರ್ವಹಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಗ್ರಾಮ ಪಂಚಾಯತ್‌ಗಳಲ್ಲಿ ಕೋಟಿ ತೆರಿಗೆ ವಸೂಲಾತಿ ಬಾಕಿ ಉಳಿಸಿಕೊಂಡಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯ (೧೦೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತ್‌ಗಳು ಸ್ವಂತ ಸಂಪನ್ಮೂಲ ಕ್ರೂಢೀಕರಣಕ್ಕಾಗಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ಕಾಯಿದೆಯಲ್ಲಿ ಪ್ರದತ್ತವಾದ ಅಧಿಕಾರವನ್ನು ಬಳಸಿಕೊಳ್ಳಲು ವಿಫಲವಾಗಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಆ) ಗ್ರಾಮ ಪಂಚಾಯತ್‌ಗಳ ಒಟ್ಟು ಸ್ವಂತ ಸಂಪನ್ಮೂಲದ ಬೇಡಿಕೆ –ವಸೂಲಿ–ಬಾಕಿ ಎಷ್ಟು ; (ಕಳೆದ ೩ ವರ್ಷದ ಜಿಲ್ಲಾವಾರು, ವರ್ಷಾವಾರು ಮಾಹಿತಿ ನೀಡುವುದು) ಗ್ರಾಮ ಪಂಚಾಯತ್‌ನ ಸ್ವಂತ ಸಂಪನ್ಮೂಲ ಕ್ರೋಢೀಕರಣಕ್ಕಾಗಿ ತೆರಿಗೆ, ಶುಲ್ಕ ವಿಧಿಸಿ ವಸೂಲಿ ಮಾಡಲು ಇರುವ ಅವಕಾಶಗಳೇನು ;

(ಇ) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿರುವ ಮೊಬೈಲ್ ಟವರ್, ವಿಂಡ್‌ಮಿಲ್, ಓ.ಎಫ್.ಸಿ., ಕೇಬಲ್, ಖಾಸಗಿ ವಿದ್ಯಾಸಂಸ್ಥೆಗಳು, ವಿಮಾನ ನಿಲ್ದಾಣ, ಎಸ್.ಇ.ಝಡ್, ಸಂಖ್ಯೆ ಎಷ್ಟು ; ಎಷ್ಟು ಪ್ರಕರಣದಲ್ಲಿ ತೆರಿಗೆ/ಶುಲ್ಕ ವಿಧಿಸಲಾಗಿದೆ ; ತೆರಿಗೆ/ಶುಲ್ಕ ವಿಧಿಸಲು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿರುವ ಮೊಬೈಲ್ ಟವರ್, ವಿಂಡ್‌ಮಿಲ್, ಓ.ಎಫ್.ಸಿ. ಕೇಬಲ್, ಖಾಸಗಿ ವಿದ್ಯಾಸಂಸ್ಥೆಗಳು, ವಿಮಾನ ನಿಲ್ದಾಣ, ಎಸ್.ಇ.ಝಡ್‌ಗಳಿಗೆ ತೆರಿಗೆ ಮತ್ತು ಶುಲ್ಕ ವಿಧಿಸಲು ಕಾಯಿದೆಯಲ್ಲಿ ಅವಕಾಶ ಕಲ್ಪಿಸಲಾಗಿದ್ದರೂ, ತೆರಿಗೆ ವಿಧಿಸಿ ಮಾಡದೇ ಇರಲು ಕಾರಣವೇನು ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ತೆರಿಗೆ ಶುಲ್ಕಗಳನ್ನು ವಿಧಿಸಿ ನಿಯಮಿತವಾಗಿ ವಸೂಲಿ ಮಾಡಲು ಹಾಗೂ ಗ್ರಾಮ ಪಂಚಾಯತ್ ಸ್ವಂತ ಸಂಪನ್ಮೂಲ ಹೆಚ್ಚಳಕ್ಕೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ವರಾಹಿ ಯೋಜನೆಯನ್ನು ಕಾಲಮಿತಿಯಲ್ಲಿ ಮುಕ್ತಾಯಗೊಳಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦ (೧೦೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ವರಾಹಿ ಯೋಜನೆ ಯಾವಾಗ ಪ್ರಾರಂಭವಾಯಿತು ; ಯೋಜನೆಯ ಮೂಲ ಅಂದಾಜು ಎಷ್ಟು;

ಪ್ರಸಕ್ತ ಪರಿಷ್ಕೃತ ಅಂದಾಜು ಎಷ್ಟು ; ಇಲ್ಲಿಯವರೆಗೆ ಖರ್ಚಾದ ಅನುದಾನವೆಷ್ಟು ;

(ಆ) ವರಾಹಿ ಯೋಜನೆಗೆ ಪ್ರಸಕ್ತ ಸಾಲಿನಲ್ಲಿ ಕಾಯ್ದಿರಿಸಿದ ಅನುದಾನವೆಷ್ಟು; ಯೋಜನೆಯನ್ನು ಯಾವಾಗ ಮುಕ್ತಾಯಗೊಳಿಸಲಾಗುವುದು ;

(ಇ) ಉಡುಪಿ ಜಿಲ್ಲೆಯ ಯಾವ ಯಾವ ಗ್ರಾಮಗಳಿಗೆ ವರಾಹಿ ನೀರಾವರಿ ಯೋಜನೆಯಿಂದ ನೀರನ್ನು ಒದಗಿಸಲಾಗುತ್ತಿದೆ ; ಇನ್ನು ಯಾವ ಯಾವ ಪ್ರದೇಶಗಳಿಗೆ ಸೌಲಭ್ಯ ವಿಸ್ತರಿಸುವ ಯೋಜನೆ ಹಮ್ಮಿಕೊಳ್ಳಲಾಗಿದೆ ;

(ಈ) ವರಾಹಿ ನೀರಾವರಿ ಯೋಜನೆಯನ್ನು ಕಾಲಮಿತಿಯಲ್ಲಿ ಮುಕ್ತಾಯಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಕಾವೇರಿ ನೀರಾವರಿ ನಿಗಮದ ಕಾಮಗಾರಿಗಳ ಕುರಿತು

**ಶ್ರೀ ಬಿ.ಎಂ.ಎಲ್ ಕಾಂತರಾಜ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧ (೭೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ಕಾವೇರಿ ನೀರಾವರಿ ನಿಗಮದ ವತಿಯಿಂದ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲು ಯೋಜನೆಯನ್ನು ರೂಪಿಸಲಾಗಿತ್ತು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಾಮಗಾರಿಗಳನ್ನು ಸಂಪೂರ್ಣವಾಗಿ ಪೂರ್ಣಗೊಳಿಸಲಾಗಿದೆಯೇ; ಪೂರ್ಣಗೊಳಿಸದಿದ್ದಲ್ಲಿ, ಎಷ್ಟು ಸಮಯದೊಳಗೆ ಪೂರ್ಣಗೊಳಿಸಲಾಗುವುದು ;

(ಇ) ಈ ಕಾಮಗಾರಿಗಳಿಗೆ ಖರ್ಚು ಮಾಡಿರುವ ಅನುದಾನವೆಷ್ಟು ; ಹಂಚಿಕೆಯಾದ ಪೂರ್ಣ ಅನುದಾನವನ್ನು ಖರ್ಚು ಮಾಡಲಾಗಿದೆಯೇ ; (ವಿವರ ನೀಡುವುದು)

(ಈ) ಹೊಸ ಕಾಮಗಾರಿಗಳನ್ನು ಕೈಗೊಳ್ಳಲು ತೆಗೆದುಕೊಂಡಿರುವ ಕ್ರಮಗಳೇನು ; ಆ ಕಾಮಗಾರಿಗಳು ಯಾವುವು ? (ತಾಲ್ಲೂಕುವಾರು, ಕಾಮಗಾರಿವಾರು ಮಾಹಿತಿ ನೀಡುವುದು)

## ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ನಿವೃತ್ತರಾದ ಕಾರ್ಮಿಕರಿಗೆ ಗ್ರಾಚ್ಯುಟಿ ಪಾವತಿಸದಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೩೨ (೨೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಸೇವೆಯಿಂದ ನಿವೃತ್ತರಾದ ಕಾರ್ಮಿಕರಿಗೆ ಗ್ರಾಚ್ಯುಟಿ, ರಜಾ ನಗದೀಕರಣ ಹಾಗೂ ಇತರೆ ಸೌಲಭ್ಯದ ಹಣವನ್ನು ಪಾವತಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೧೬ರ ಏಪ್ರಿಲ್ ಮಾಹೆಯಿಂದ ೨೦೧೭ರ ಡಿಸೆಂಬರ್ ಮಾಹೆಯವರೆಗೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಎಷ್ಟು ಕಾರ್ಮಿಕರು ಸೇವೆಯಿಂದ ನಿವೃತ್ತಿಯಾಗಿರುತ್ತಾರೆ ; (ಘಟಕವಾರು ಮಾಹಿತಿಯನ್ನು ನೀಡುವುದು)

(ಇ) ೨೦೧೬ರ ಏಪ್ರಿಲ್‌ನಿಂದ ೨೦೧೭ರ ಡಿಸೆಂಬರ್‌ವರೆಗೆ

ಸೇವೆಯಿಂದ ನಿವೃತ್ತಿಯಾದ ಎಷ್ಟು ಕಾರ್ಮಿಕರಿಗೆ ಇದುವರೆವಿಗೂ ಗ್ರಾಚ್ಯುಟಿ ಹಾಗೂ ರಜಾ ನಗದೀಕರಣದ ಹಣವನ್ನು ಪಾವತಿಸಲಾಗಿರುತ್ತದೆ; (ಘಟಕವಾರು ಮಾಹಿತಿಯನ್ನು ನೀಡುವುದು)

(ಈ) ಬಾಕಿ ಇರುವ ಕಾರ್ಮಿಕರಿಗೆ ಗ್ರಾಚ್ಯುಟಿ, ರಜಾ ನಗದೀಕರಣ ಹಾಗೂ ಇತರ ಸೌಲಭ್ಯದ ಹಣವನ್ನು ಯಾವಾಗ ಪಾವತಿಸಲಾಗುವುದು ?

## ರಾಜ್ಯದಲ್ಲಿ ಖರೀದಿಸಲ್ಪಟ್ಟ ವೈದ್ಯಕೀಯ ಉಪಕರಣಗಳು ಸಮರ್ಪಕ ಬಳಕೆಯಾಗದಿರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೩ (೩೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಿಯಮಿತ ನಿರ್ಗಮಿತ ಸರ್ಕಾರದ ಅವಧಿಯಲ್ಲಿ ಖರೀದಿಸಲಾದ ವೈದ್ಯಕೀಯ ಉಪಕರಣಗಳಲ್ಲಿ ಉಳಿಕೆಯಾಗದೆ ಇರುವ ವೈದ್ಯಕೀಯ ಉಪಕರಣಗಳೆಷ್ಟು ; ಮತ್ತು ಇವುಗಳು ಬಳಕೆಯಾಗದೆ ಇರಲು ಕಾರಣವೇನು ;

(ಆ) ಇಂತಹ ವೈದ್ಯಕೀಯ ಉಪಕರಣಗಳನ್ನು ಅಗತ್ಯತೆ ಇಲ್ಲದೆ ಖರೀದಿಸಲಾಗಿದೆಯೇ ; ಅಥವಾ ಖರೀದಿಸಿದ ವೈದ್ಯಕೀಯ ಉಪಕರಣಗಳು ಉಪಯೋಗಕ್ಕೆ ಯೋಗ್ಯವಲ್ಲದ ಕಳಪೆ ಗುಣಮಟ್ಟದಿಂದ ಕೂಡಿದೆಯೇ ;

(ಇ) ರಾಜ್ಯದಲ್ಲಿನ ಸರ್ಕಾರಿ ಆಸ್ಪತ್ರೆಗಳಿಗೆ ಅಗತ್ಯ ವೈದ್ಯಕೀಯ ಉಪಕರಣಗಳನ್ನು ಪೂರೈಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಉಡುಪಿ ಜಿಲ್ಲೆಯ ಯಾವ ಯಾವ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಯಂತ್ರಗಳ ಸೌಲಭ್ಯವಿದೆ ; ಮತ್ತು ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಯಂತ್ರಗಳೆಷ್ಟು ; ಮತ್ತು ಸ್ಥಗಿತಗೊಂಡಿರುವ ಯಂತ್ರಗಳೆಷ್ಟು ; ಮತ್ತು ಇಂತಹ ಸ್ಥಗಿತಗೊಂಡಿರುವ ಯಂತ್ರಗಳನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ? (ತಾಲ್ಲೂಕುವಾರು, ಆಸ್ಪತ್ರೆವಾರು ವಿವರ ನೀಡುವುದು)

## ಕುಂದಾಪುರಕ್ಕೆ ಉಪ ಸಾರಿಗೆ ಆಯುಕ್ತರ ಕಛೇರಿ (ARTO) ಮಂಜೂರು ಮಾಡುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೪ (೩೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಉಪ ಸಾರಿಗೆ ಆಯುಕ್ತರ ಕಛೇರಿ (ARTO) ಗಳನ್ನು ಮಂಜೂರು ಮಾಡುವಾಗ ವಾಹನಗಳ ಸಂಖ್ಯೆಗೆ ಅನುಗುಣವಾಗಿ ಮಂಜೂರು ಮಾಡಲಾಗುವುದೇ ; (ಮಾನದಂಡದ ಪ್ರತಿ ಒದಗಿಸುವುದು)

(ಆ) ರಾಜ್ಯದಲ್ಲಿ ರಾಜಕೀಯ ಪ್ರಭಾವ ಹಾಗೂ ಅಧಿಕಾರಿಗಳ ನಿರ್ಲಕ್ಷದಿಂದಾಗಿ ಅವಶ್ಯಕತೆ, ಅಗತ್ಯತೆ ಇರುವಲ್ಲಿ ಉಪ ಸಾರಿಗೆ ಆಯುಕ್ತರ ಕಛೇರಿ (ARTO) ಗಳು ಮಂಜೂರುಗೊಳ್ಳದಿರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಉಡುಪಿ ಜಿಲ್ಲೆಯಲ್ಲಿನ ಎಲ್ಲಾ ತಾಲ್ಲೂಕುಗಳಿಗಿಂತ ಅತೀ ಹೆಚ್ಚು ವಾಹನಗಳನ್ನು ಹೊಂದಿರುವ ಕುಂದಾಪುರ ಉಪ ವಿಭಾಗಕ್ಕೆ ಇಲ್ಲಿಯತನಕ ಉಪ ಸಾರಿಗೆ ಆಯುಕ್ತರ ಕಛೇರಿ (ARTO) ಮಂಜೂರು ಮಾಡದೆ ನಿರ್ಲಕ್ಷಿಸಲು ಕಾರಣವೇನು ; ಇನ್ನಾದರೂ ಕುಂದಾಪುರಕ್ಕೆ ಉಪ ಸಾರಿಗೆ ಆಯುಕ್ತರ ಕಛೇರಿ ಮಂಜೂರು ಮಾಡಲಾಗುವುದೇ ?

## ಮಾನ್ಯ ಉಪ ಲೋಕಾಯುಕ್ತರು ವರಾಹಿ ನೀರಾವರಿ ಯೋಜನೆ ಕುರಿತು ನೀಡಿರುವ ವರದಿ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೫ (೩೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ಯ ಉಪ ಲೋಕಾಯುಕ್ತರು ಕರ್ನಾಟಕ ನೀರಾವರಿ ನಿಗಮದಿಂದ ನಿರ್ವಹಿಸಲ್ಪಡುತ್ತಿರುವ ವರಾಹಿ ನೀರಾವರಿ ಯೋಜನೆಯ ಕಳಪೆ ಕಾಮಗಾರಿಗಳು ಹಾಗೂ ಇನ್ನಿತರ ವಿಚಾರಗಳ ಮೇಲೆ ಬಂದ ದೂರಿಗೆ ತನಿಖೆ ನಡೆಸಿ ನೀಡಿರುವ ವರದಿಯಲ್ಲಿ ವರಾಹಿ ನೀರಾವರಿ ಯೋಜನೆಯನ್ನು ಪೂರ್ಣಗೊಳಿಸಲು ವಿಳಂಬ ಮಾಡುತ್ತಿರುವುದರಿಂದ ರೈತರಿಗೆ ಅನುಕೂಲವಾಗುವ ಬದಲು ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಜಲ ವಿದ್ಯುತ್ ಉತ್ಪಾದನಾ ಘಟಕದವರಿಗೆ ಅನುಕೂಲವಾಗುತ್ತಿದೆ ಎಂದು

ವರದಿಯಲ್ಲಿ ತಿಳಿಸಿರುವುದು ನಿಜವೇ ; ನಿಜವಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಹಾಗೂ ತೆಗೆದುಕೊಳ್ಳುವ ಕ್ರಮಗಳೇನು ; ಇಲ್ಲವಾದಲ್ಲಿ, ಕಾರಣವೇನು ;

(ಆ) ಮಾನ್ಯ ಉಪ ಲೋಕಾಯುಕ್ತರು ತಮ್ಮ ವರದಿಯಲ್ಲಿ ನೀಡಿರುವಂತೆ ವರಾಹಿ ನೀರಾವರಿ ಯೋಜನೆಯಿಂದ ಇಲ್ಲಿಯ ತನಕ ಸುಮಾರು ೧೦೦ ಕೋಟಿ ರೂಪಾಯಿ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗಿದೆ ಹಾಗೂ ಈ ನಷ್ಟಕ್ಕೆ ನೀರಾವರಿ ಇಲಾಖಾಧಿಕಾರಿಗಳು ಹಾಗೂ ಗುತ್ತಿಗೆದಾರರು ಕಾರಣ ಎಂದಿರುವುದು ನಿಜವೇ ; ಈ ರೀತಿ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗಲು ಕಾರಣರಾದ ಇಲಾಖಾಧಿಕಾರಿಗಳು ಹಾಗೂ ಗುತ್ತಿಗೆದಾರರ ಮೇಲೆ ಕ್ರಮ ಕೈಗೊಳ್ಳುವುದೇ ;

(ಇ) ವರಾಹಿ ನೀರಾವರಿ ಯೋಜನೆಯನ್ನು ಮೂಲ ಯೋಜನೆಯಂತೆ ಪೂರ್ಣಗೊಳಿಸಲು ತಗಲುವ ಅವಧಿ ಹಾಗೂ ವೆಚ್ಚವೆಷ್ಟು ?

## ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಬಯೋಮೆಟ್ರಿಕ್ ವ್ಯವಸ್ಥೆ ಅಳವಡಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬ (೩೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ಹೆಚ್ಚಿನ ಎಲ್ಲಾ ಕಛೇರಿ ಸಿಬ್ಬಂದಿಗಳ ಹಾಜರಾತಿಯನ್ನು ಬಯೋಮೆಟ್ರಿಕ್ ಯಂತ್ರದ ಮೂಲಕ ದಾಖಲಿಸಲಾಗುತ್ತಿದ್ದು, ಗ್ರಾಮ ಪಂಚಾಯತ್‌ಗಳಲ್ಲೂ ಸಹ ಇಲಾಖಾ ಸಿಬ್ಬಂದಿಗಳ ಕರ್ತವ್ಯ ದಕ್ಷತೆಯನ್ನು ಹೆಚ್ಚಿಸಲು ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯನ್ನು

ಅಳವಡಿಸಲಾಗುವುದೆ ; ಅಳವಡಿಸಲಾಗುವುದಾದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ; ಇಲ್ಲವಾದಲ್ಲಿ, ಕಾರಣವೇನು;

(ಆ) ಗ್ರಾಮ ಪಂಚಾಯತ್‌ಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯನ್ನು ಅಳವಡಿಸುವುದಾದಲ್ಲಿ ಇದರ ಮೇಲ್ವಿಚಾರಣೆಯನ್ನು ಯಾರಿಗೆ ನೀಡಲಾಗುವುದು ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಈಗಾಗಲೇ ಯಾವುದಾದರೂ ಗ್ರಾಮ ಪಂಚಾಯತ್‌ಗಳು ಬಯೋಮೆಟ್ರಿಕ್ ಹಾಜರಾತಿಯ ವ್ಯವಸ್ಥೆಯನ್ನು ಅಳವಡಿಸಿಕೊಂಡಿವೆಯೇ ; ಅಳವಡಿಸಿ ಕೊಂಡಿದ್ದಲ್ಲಿ ಇದರ ನಿರ್ವಹಣೆಯ ಹೊಣೆಯನ್ನು ನಿರ್ವಹಿಸುವ ಅಧಿಕಾರಿ ಯಾರು ? (ತಾಲ್ಲೂಕುವಾರು ವಿವರ ನೀಡುವುದು)

## ವರಾಹಿ ನೀರಾವರಿ ಯೋಜನೆಯ ಏತ ನೀರಾವರಿ ಮತ್ತು ಬಲದಂಡೆ ಯೋಜನೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭ (೩೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಿನಾಂಕ : ೦೮–೦೧–೨೦೧೮ ರಂದು ಬೈಂದೂರಿನಲ್ಲಿ ಹಿಂದಿನ ಮುಖ್ಯಮಂತ್ರಿಗಳು ಶಂಕುಸ್ಥಾಪನೆ ಮಾಡಿದ ಕರ್ನಾಟಕ ನೀರಾವರಿ ನಿಗಮದಿಂದ ನಿರ್ವಹಿಸಲ್ಪಡುತ್ತಿರುವ ವರಾಹಿ ನೀರಾವರಿ ಯೋಜನೆಯ ಏತ ನೀರಾವರಿ ಯೋಜನೆಗೆ ತಗಲುವ ಅಂದಾಜು

ಮೊತ್ತವೆಷ್ಟು ; ಮತ್ತು ಈ ಯೋಜನೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ;

(ಆ) ವರಾಹಿ ನೀರಾವರಿ ಯೋಜನೆಯು ಏತ ನೀರಾವರಿ ಯೋಜನೆಯಿಂದ ಯಾವ ಯಾವ ಗ್ರಾಮಗಳ ರೈತರಿಗೆ ಎಷ್ಟು ಎಕರೆ ಕೃಷಿ ಭೂಮಿಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸಲಾಗುವುದು ; (ಗ್ರಾಮವಾರು ವಿವರ ನೀಡುವುದು)

(ಇ) ೩೮ ವರ್ಷಗಳ ಹಿಂದೆ ಶಂಕುಸ್ಥಾಪನೆಯಾಗಿರುವ ವರಾಹಿ ನೀರಾವರಿ ಯೋಜನೆಯು ಬಲದಂಡ ಯೋಜನೆಗೆ ಸಂಬಂಧಿಸಿದಂತೆ ಭೂ ಸ್ವಾಧೀನ ಪ್ರಕ್ರಿಯೆ ಇಲ್ಲಿಯ ತನಕ ಪೂರ್ಣಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗೂ ಬಲದಂಡೆ ಯೋಜನೆಯ ಕಾಮಗಾರಿಗಳು ಟೆಂಡರ್ ಪ್ರಕ್ರಿಯೆ ನಡೆಯದೆ ಇಲ್ಲಿಯವರೆಗೂ ಪ್ರಾರಂಭವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ತುರ್ತು ಕ್ರಮಗಳೇನು ;

(ಈ) ವರಾಹಿ ನೀರಾವರಿ ಯೋಜನೆಯಲ್ಲಿ ವಿವಿಧ ದರ್ಜೆಯ ಅಭಿಯಂತರುಗಳ ಕೊರತೆಯಿಂದ ಯೋಜನೆ ನಿರೀಕ್ಷಿತ ಮಟ್ಟದಲ್ಲಿ ಪೂರ್ಣಗೊಳ್ಳಲು ತೊಡಕಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತಗೆದುಕೊಂಡ ಕ್ರಮಗಳೇನು ?

## ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆ ಬಗ್ಗೆ

**ಶ್ರೀ ಎಂ.ಕೆ ಪ್ರಾಣೇಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮ (೫೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ವರ್ಷದಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ನೀಡುವಾಗ ಜಾತಿಯ ಮಾನದಂಡ ಅನುಸರಿಸುತ್ತಿರುವುದು ನಿಜವೇ ;

(ಆ) ಎಲ್ಲಾ ವಿದ್ಯಾರ್ಥಿಗಳಿಗೂ ಏಕನೀತಿಯು ಪಾಸುಗಳನ್ನು ವಿತರಿಸಲಾಗುವುದೆಂದು ಸರ್ಕಾರ ಕೊಟ್ಟ ಭರವಸೆಯನ್ನು ಯಾವ ದಿನಾಂಕದಿಂದ ವಾಪಸ್ ಪಡೆಯಲಾಗಿದೆ ;

(ಇ) ಪ್ರಸ್ತುತ ವರ್ಷ ಬಸ್‌ಪಾಸ್ ವಿತರಣೆಯ ತಾರತಮ್ಯ ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯ (೫೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇವೆ ; ಇಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು; ವೈದ್ಯರು ರೋಗಿಗಳಿಗೆ ಚಿಕಿತ್ಸೆ ನೀಡಲು ಎಲ್ಲಾ ಸಮಯದಲ್ಲಿ ಲಭ್ಯವಿರುವ ಬಗ್ಗೆ ಮಾಹಿತಿ ನೀಡುವುದು ;

(ಆ) ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸರ್ಕಾರವು ಕಳೆದ ೫ ವರ್ಷಗಳಲ್ಲಿ ನೀಡಿರುವ ಅನುದಾನ ಎಷ್ಟು ; ನೀಡಿರುವ ಅನುದಾವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಲಾಗಿದೆಯೇ; ಮಾಡಿಕೊಂಡಿದ್ದಲ್ಲಿ, ಸ್ಪಷ್ಟ ಮಾಹಿತಿ ನೀಡುವುದು ;

(ಇ) ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಉನ್ನತೀಕರಿಸಲು ಸರ್ಕಾರ ಯಾವ ಯೋಜನೆಗಳನ್ನು ಹಾಕಿಕೊಂಡಿದೆ ; ಮತ್ತು ಅದಕ್ಕೆ ನಿಗಧಿಪಡಿಸಿದ ಅನುದಾನ ಎಷ್ಟು ; ಇದಕ್ಕೆ ರಾಜ್ಯ ಮತ್ತು ಕೇಂದ್ರದ ಪಾಲೆಷ್ಟು ? (ಪ್ರಾಥಮಿಕ ಆರೋಗ್ಯ ಕೇಂದ್ರವಾರು ಸಂಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ವಿವಿಧ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೦ (೫೯) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ನಿರ್ಮಿಸಲಾದ ಚೆಕ್‌ಡ್ಯಾಂಗಳು ಹಾಗೂ ಕೊರೆಯಲಾದ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಹಾಗೂ ಬಳಕೆಯಾದ ಅನುದಾನವೆಷ್ಟು ; (ವರ್ಷವಾರು ಹಾಗೂ ಕ್ಷೇತ್ರವಾರು ವಿವರ ನೀಡುವುದು)

(ಇ) ೨೦೧೬–೧೭ನೇ ಸಾಲಿನಲ್ಲಿ ಈ ಜಿಲ್ಲೆಯಲ್ಲಿ ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ಯೋಜನೆವಾರು ಪೂರ್ಣ ವಿವರ ನೀಡುವುದು)

## ವೈದ್ಯಕೀಯ ಕಾಲೇಜುಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೧ (೬೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮, ೨೦೧೮–೧೯ನೇ ಸಾಲಿನಲ್ಲಿ ಪ್ರಾರಂಭಿಸಲಾದ ಹೊಸ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಸರ್ಕಾರಿ / ಖಾಸಗಿ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಕಳೆದ ಮೂರು ವರ್ಷಗಳಲ್ಲಿ ನೂತನವಾಗಿ ಸ್ಥಾಪಿಸಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಇ) ಇದಕ್ಕಾಗಿ ಇದುವರೆವಿಗೂ ವೆಚ್ಚ ಮಾಡಿರುವ ಮೊತ್ತವೆಷ್ಟು? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಿದ ಕಾಮಗಾರಿಗಳ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨ (೫೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಭಾರಿ ಮತ್ತು ಮಧ್ಯಮ ನೀರಾವರಿಯ ಯಾವ ಯಾವ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ; ಯಾವ ಯಾವ ಯೋಜನೆಯ ಕಾಮಗಾರಿಗಳು ಪ್ರಗತಿಯಲ್ಲಿವೆ; ಇವುಗಳಿಗೆ ಆಯವ್ಯಯದಲ್ಲಿ

ಕಾದಿರಿಸಿದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ವೆಚ್ಚವಾದ ಅನುದಾನವೆಷ್ಟು ; (ಯೋಜನೆಯ ಶೀರ್ಷಿಕೆವಾರು ಸ್ಪಷ್ಟ ಮಾಹಿತಿ ನೀಡುವುದು)

(ಆ) ನೀರಾವರಿ ಯೋಜನೆಯ ಯೋಜನಾ ಪ್ರದೇಶದಲ್ಲಿ SCP/ STP ಘಟಕದಡಿಯಲ್ಲಿ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವರ್ಗದಡಿಯಲ್ಲಿ) ಕೈಗೊಂಡ ಕಾಮಗಾರಿಗಳು ಯಾವುವು ; (ಕಳೆದ ೩ ವರ್ಷಗಳ ವರ್ಷವಾರು, ಕಾಮಗಾರಿವಾರು ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಇವುಗಳಿಗೆ ಒದಗಿಸಿದ ಅನುದಾನದ ವಿವರ ಒದಗಿಸುವುದು ; ಈ ಕಾಮಗಾರಿಗಳು ಯಾವ ಹಂತದಲ್ಲಿದೆ ? (ಪೂರ್ಣ ಮಾಹಿತಿ ಒದಗಿಸುವುದು)

## ನೀಟ್ ಅಡಿಯಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೪೩ (೧೦೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೀಟ್ (NEET) ಅಡಿಯಲ್ಲಿ ವೈದ್ಯಕೀಯ ಪ್ರವೇಶ ಪರೀಕ್ಷೆಯಲ್ಲಿ ಅರ್ಹತೆ ಹೊಂದಿರುವ ಕರ್ನಾಟಕ ವಿದ್ಯಾರ್ಥಿಗಳು ಬೇರೆ ರಾಜ್ಯಗಳ ವೈದ್ಯಕೀಯ ಕಾಲೇಜುಗಳಲ್ಲಿ ಪ್ರವೇಶ ಪಡೆಯಲು ಸಾಧ್ಯವೇ ; ಹಾಗಿದ್ದಲ್ಲಿ, ಯಾವ ಯಾವ ರಾಜ್ಯಗಳಲ್ಲಿ ಕರ್ನಾಟಕ ವಿದ್ಯಾರ್ಥಿಗಳಿಗೆ ಪ್ರವೇಶ ಪಡೆಯಲು ಅನುಮತಿಯನ್ನು ನೀಡಲಾಗಿದೆ ; (ದಾಖಲಾತಿಗಳೊಂದಿಗೆ ವಿವರಗಳನ್ನು ನೀಡುವುದು)

(ಆ) ಕರ್ನಾಟಕದಲ್ಲಿರುವ ವೈದ್ಯಕೀಯ ಕಾಲೇಜುಗಳಲ್ಲಿ ಕರ್ನಾಟದ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುತ್ತಿರುವ ಶೇಕಡವಾರು ವಿವರಗಳನ್ನು ನೀಡುವುದು ; (ದಾಖಲಾತಿಗಳೊಂದಿಗೆ ವಿವರಗಳನ್ನು ನೀಡುವುದು)

(ಇ) ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ನೀಟ್ ಮತ್ತು ಸಿ.ಇ.ಟಿ. ಆಧಾರದಲ್ಲಿ ಅರ್ಹತೆ ಹೊಂದಿರುವ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗುತ್ತಿದೆಯೇ ; ಇದ್ದಲ್ಲಿ, ೨೦೧೭ರ ಪ್ರವೇಶದ ಮಾಹಿತಿಯನ್ನು ರ‍್ಯಾಂಕಿಂಗ್ ಆಧಾರದ ಮೇಲೆ ದಾಖಲಾತಿಗಳೊಂದಿಗೆ ನೀಡುವುದು ;

(ಈ) ೨೦೧೭ರಲ್ಲಿ ಕರ್ನಾಟಕ ಹಾಗೂ ಬೇರೆ ರಾಜ್ಯದ ಅರ್ಹತೆ ಹೊಂದಿರುವ ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶ ನೀಡಿರುವ ರಾಜ್ಯವಾರು ಮಾಹಿತಿಯನ್ನು ದಾಖಲಾತಿಗಳೊಂದಿಗೆ ಪ್ರತ್ಯೇಕವಾಗಿ ಕಾಲೇಜಿನ ಅನುಗುಣವಾಗಿ ನೀಡುವುದು ?

## ಕರ್ನಾಟಕ ರಾಜ್ಯದ ಎಲ್ಲಾ ಆಸ್ಪತ್ರೆಗಳಲ್ಲಿನ ಯುನಾನಿ ಚಿಕಿತ್ಸಾ ಕೇಂದ್ರ ಹಾಗೂ ವೈದ್ಯರ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೪೪ (೧೦೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿರುವ ರೆಫರಲ್ ಆಸ್ಪತ್ರೆಗಳು ಸೇರಿದಂತೆ ಕರ್ನಾಟಕ ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಮತ್ತು ಆಯುರ್ವೇದ ಆಸ್ಪತ್ರೆಗಳಲ್ಲಿ ಎಷ್ಟು ಯುನಾನಿ ಚಿಕಿತ್ಸಾ

ಕೇಂದ್ರಗಳಿವೆ ; (ಸಂಪೂರ್ಣವಾದ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು)

(ಆ) ಈ ಕೇಂದ್ರಗಳಲ್ಲಿ (BUMS ಪದವಿ ಪಡೆದ ಯುನಾನಿ ವೈದ್ಯರು) ಎಷ್ಟು ಯುನಾನಿ ವೈದ್ಯರು ಕಾರ್ಯ ನಿರ್ವಹಿಸುತ್ತಿದ್ದಾರೆ ; (ಸಂಪೂರ್ಣವಾದ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು)

(ಇ) ಕಳೆದ ೮ ವರ್ಷಗಳಿಂದ ಯುನಾನಿ ಪದವಿ ಪಡೆದ ಸಾಮಾನ್ಯ ವೈದ್ಯರ (General Physicians) ಹುದ್ದೆಗೆ ಸರ್ಕಾರಿ ಸೇವೆಗೆ ಎಷ್ಟು ವೈದ್ಯರನ್ನು ನೇಮಕಾತಿ ಮಾಡಲಾಗಿದೆ ; (ಸಂಪೂರ್ಣವಾದ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು)

(ಈ) ಕರ್ನಾಟಕ ರಾಜ್ಯದಾದ್ಯಂತ ಬೆಂಗಳೂರು ನಗರದಲ್ಲಿರುವ ರೆಪರಲ್ ಆಸ್ಪತ್ರೆಗಳು ಸೇರಿ ಸರ್ಕಾರಿ ಆಸ್ಪತ್ರೆಗಳಲ್ಲಿ ಮತ್ತು ಆಯುರ್ವೇದ ಆಸ್ಪತ್ರೆಗಳಲ್ಲಿ ಖಾಲಿ ಇರುವ ಯುನಾನಿ ವೈದ್ಯ ಹುದ್ದೆಗಳ ಸಂಖ್ಯೆ ಎಷ್ಟು ; (ಸಂಪೂರ್ಣವಾದ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು)

(ಉ) ಯುನಾನಿ ಪದವಿ ಪಡೆದ ನೂರಾರು ನಿರುದ್ಯೋಗಿ ವೈದ್ಯರು ಸರ್ಕಾರಿ ನೇಮಕಾತಿಗಾಗಿ ಕಳೆದ ೮ ವರ್ಷಗಳಿಂದ ಕಾಯುತ್ತಿದ್ದು, ವಯೋಮಿತಿ ಮೀರುವ ಹಂತದಲ್ಲಿದ್ದು, ಅಂತಹವರಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣವಾದ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು)

## ಶೌಚಾಲಯಗಳ ನಿರ್ಮಾಣ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫ (೭೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೪ ವರ್ಷಗಳಲ್ಲಿ ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಎಷ್ಟು ಜಿಲ್ಲೆಗಳನ್ನು ಬಯಲು ಶೌಚಾಲಯ ಮುಕ್ತ ಜಿಲ್ಲೆಗಳೆಂದು ಗುರುತಿಸಲಾಗಿದೆ;

(ಇ) ಸ್ವಚ್ಛ ಭಾರತ ಅಭಿಯಾನದಡಿಯಲ್ಲಿ ರಾಜ್ಯಕ್ಕೆ ದೊರೆತ ಅನುದಾನವೆಷ್ಟು; ಈ ಅನುದಾನವನ್ನು ಯಾವ ಕಾರ್ಯಕ್ರಮಗಳಿಗೆ ವೆಚ್ಚ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಈ) ಸ್ವಚ್ಛ ಭಾರತ ಯೋಜನೆಗೆ ರಾಜ್ಯ ಸರ್ಕಾರವು ಎಷ್ಟು ಅನುದಾನ ನೀಡಿದೆ; ಈ ಅನುದಾನವನ್ನು ಯಾವ ರೀತಿ ವೆಚ್ಚ ಮಾಡಲಾಗಿದೆ; ರಾಜ್ಯ ಸರ್ಕಾರದ ಅನುದಾನದಿಂದ ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗಿದೆ?

## ರಾಜೀವ್‌ಗಾಂಧಿ ವೈದ್ಯಕೀಯ ಮಹಾವಿದ್ಯಾಲಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬ (೭೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜೀವ್ ಗಾಂಧಿ ವೈದ್ಯಕೀಯ ಮಹಾವಿದ್ಯಾಲಯವನ್ನು ರಾಮನಗರ ಜಿಲ್ಲೆಗೆ ವರ್ಗಾವಣೆ ಮಾಡಲು ನಿರ್ಧರಿಸಲಾಗಿದೆಯೇ;

ಈ ವಿಚಾರದಲ್ಲಿ ಆಗಿರುವ ಪ್ರಗತಿ ಏನು; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ವಿದ್ಯಾಲಯವನ್ನು ರಾಮನಗರಕ್ಕೆ ವರ್ಗಾವಣೆ ಮಾಡಿದಲ್ಲಿ, ಅಲ್ಲಿ ಕಟ್ಟಡದ ಸಹಿತ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹೊಸದಾಗಿ ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಈ ಉದ್ದೇಶಕ್ಕೆ ಸರ್ಕಾರ ಮೀಸಲಿಟ್ಟಿರುವ ಮೊತ್ತ ಎಷ್ಟು; ಹಾಲಿ ಕಾರ್ಯನಿರ್ವಹಿಸುತ್ತಿರುವ ಸ್ಥಳದಲ್ಲಿ ಮೂಲಭೂತ ಸೌಲಭ್ಯಗಳನ್ನು ಯಾವ ರೀತಿಯಾಗಿ ಬಳಸಿಕೊಳ್ಳಲಾಗುವುದು?

## ಗರ್ಭಿಣಿ ಮಹಿಳೆಯರ ಆರೋಗ್ಯದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭ (೭೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಒಂದು ವರ್ಷದಲ್ಲಿ ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಡಿಯಲ್ಲಿ ರಾಜ್ಯದಲ್ಲಿ ಎಷ್ಟು ಗರ್ಭಿಣಿ ಮಹಿಳೆಯರನ್ನು ಪ್ರಸವ ಪೂರ್ವ ಆರೋಗ್ಯ ತಪಾಸಣೆಗೊಳಪಡಿಸಲಾಗಿದೆ; ಇದರಿಂದ ಎಷ್ಟು ತೀವ್ರ ತಾಪತ್ರಯದ ಗರ್ಭಿಣಿಯರನ್ನು ಗುರುತಿಸಲಾಗಿದೆ;

(ಆ) ಕಳೆದ ಒಂದು ವರ್ಷದಲ್ಲಿ ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯ ಮೂಲಕ ಎಷ್ಟು ಗರ್ಭಿಣಿ ತಾಯಂದರಿಗೆ ಉತ್ತೇಜಕ ಧನ ಸಹಾಯ ನೀಡಲಾಗಿದೆ; ಇದರಲ್ಲಿ ರಾಜ್ಯ ಸರ್ಕಾರವು ನೀಡಿದ ಅನುದಾನವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಇಂದ್ರಧನುಷ್ ಮಿಶನ್ ಮೂಲಕ ಖಾಯಿಲೆಯಿಂದ ರಕ್ಷಣೆ ಪಡೆಯಲು ಕಳೆದ ಒಂದು ವರ್ಷದಲ್ಲಿ ರಾಜ್ಯದ ಎಷ್ಟು ಗರ್ಭಿಣಿ ಸ್ತ್ರೀಯರಿಗೆ ಮತ್ತು ಮಕ್ಕಳಿಗೆ ಲಸಿಕೆಯನ್ನು ನೀಡಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸರ್ಕಾರಿ ವೈದ್ಯಕೀಯ ವಿಜ್ಞಾನ ಸಂಸ್ಥೆಗಳಲ್ಲಿ ಪ್ರವೇಶ ಸೀಟುಗಳ ಕಡಿತದ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೪೮ (೯೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಪ್ಪಳ, ಚಾಮರಾಜನಗರ, ಮಡಿಕೇರಿ, ಕಾರವಾರಗಳ ಸರ್ಕಾರಿ ವೈದ್ಯಕೀಯ ವಿಜ್ಞಾನ ಸಂಸ್ಥೆಗಳಲ್ಲಿ (NCI) ಸಂಸ್ಥೆಯವರು ಪ್ರವೇಶದ ವೈದ್ಯಕೀಯ ಸೀಟುಗಳನ್ನು ಕಡಿತಗೊಳಿಸಿದ್ದು ನಿಜವೇ; ಹಾಗಿದಲ್ಲಿ, ಯಾವ ಕಾರಣಕ್ಕಾಗಿ ಸೀಟುಗಳನ್ನು ಕಡಿತಗೊಳಿಸಲಾಗಿದೆ; (ವಿವರ ನೀಡುವುದು)

(ಆ) ವೈದ್ಯಕೀಯ ಸೀಟುಗಳನ್ನು ಕಡಿತಗೊಳಿಸಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಶುದ್ಧ ನೀರಿನ ಘಟಕಗಳು ಕಾರ್ಯನಿರ್ವಹಿಸುತ್ತಿಲ್ಲದಿರುವ ಕುರಿತು

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯ (೦೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ನಿರ್ಮಾಣ ಮಾಡಿರುವ ಶುದ್ಧ ನೀರಿನ ಘಟಕಗಳ ಸಂಖ್ಯೆ ಎಷ್ಟು; ಇವುಗಳನ್ನು ಎಲ್ಲೆಲ್ಲಿ ಸ್ಥಾಪಿಸಲಾಗಿದೆ;

ಇವುಗಳ ನಿರ್ಮಾಣಕ್ಕೆ ತಗುಲಿದ ವೆಚ್ಚವೆಷ್ಟು; (ಘಟಕಗಳವಾರು ವಿವರ ನೀಡುವುದು)

(ಆ) ಇಲ್ಲಿ ನಿರ್ಮಾಣ ಮಾಡಿರುವ ಶುದ್ಧ ನೀರಿನ ಘಟಕಗಳು ಚಾಲನೆಯಲ್ಲಿವೆಯೇ; ಇದ್ದಲ್ಲಿ ದಿನನಿತ್ಯ ಪ್ರಯೋಜನ ಪಡೆಯುತ್ತಿರುವ ಸಾರ್ವಜನಿಕರ ಸಂಖ್ಯೆ ಎಷ್ಟು; ಇವುಗಳ ಉಸ್ತುವಾರಿಯನ್ನು ಯಾರಿಗೆ ನೀಡಲಾಗಿದೆ? (ಪೂರ್ಣ ವಿವರ ನೀಡುವುದು)

## ಭಾರಿ ವಾಹನ ಚಾಲಕರಿಗೆ ಹೆಚ್ಚಿನ ಗ್ರಾಚ್ಯುಟಿಯೊಂದಿಗೆ ವಿಶೇಷ ಸ್ವಯಂನಿವೃತ್ತಿ ಯೋಜನೆ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೦ (೦೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ರಸ್ತೆ ಸಾರಿಗೆ ಸಂಸ್ಥೆಗಳಲ್ಲಿ ದುಡಿಯುವ ಚಾಲಕರಿಗೆ ನೀಡಲಾಗುತ್ತಿರುವ ವೇತನ ಮತ್ತು ಇತರೆ ಸೌಲಭ್ಯಗಳೇನು; (ಪೂರ್ಣ ವಿವರ ನೀಡುವುದು)

(ಆ) ಈ ಚಾಲಕರುಗಳು ೫೫ ವರ್ಷ ತುಂಬಿದ ನಂತರವು ಭಾರಿ ವಾಹನ ಚಾಲನೆ ಮಾಡಲು ಶಕ್ತರಾಗಿರುತ್ತಾರೆಯೇ; ೫೫ ವರ್ಷ ತುಂಬಿರುವ ಚಾಲಕರುಗಳಿಗೆ ಸಾಮರ್ಥ್ಯ ಪರೀಕ್ಷಿಸಲು ಇರುವ ಮಾನದಂಡಗಳೇನು; (ವಿವರ ನೀಡುವುದು)

(ಇ) ಸಾರಿಗೆ ಇಲಾಖೆಯಲ್ಲಿ ೫೫ ವರ್ಷ ತುಂಬಿರುವ ಚಾಲಕರುಗಳಿಗೆ ಹೆಚ್ಚಿನ ಗ್ರಾಚ್ಯುಟಿಯೊಂದಿಗೆ ವಿಶೇಷ ಸ್ವ–ನಿವೃತ್ತಿ ಯೋಜನೆಗಳು ಇವೆಯೇ; ಇಲ್ಲದಿದ್ದಲ್ಲಿ, ಇದನ್ನು ಜಾರಿಗೆ ತರಲು ಸರ್ಕಾರದ ಕ್ರಮಗಳೇನು? (ಪೂರ್ಣ ವಿವರ ನೀಡುವುದು)

# ರಾಜ್ಯದಲ್ಲಿರುವ ಎಲ್ಲಾ ಗ್ರಾಮಗಳನ್ನು ಬಯಲು ಶೌಚಮುಕ್ತವಾಗಿಸುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧ (೧೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಾಯಿತಿಗಳು ಬಯಲು ಶೌಚಮುಕ್ತ ಪ್ರದೇಶವಾಗಿವೆಯೇ ;

(ಆ) ಬಯಲು ಶೌಚಮುಕ್ತ ಪ್ರದೇಶವಾಗಲು ಶೌಚಾಲಯ ನಿರ್ಮಾಣ ಶೇ.೧೦೦ರಷ್ಟು ಪ್ರಗತಿ ಸಾಧಿಸಲಾಗಿದೆಯೇ ;

(ಇ) ಬಯಲು ಶೌಚಮುಕ್ತಕ್ಕಾಗಿ ಶೌಚಾಲಯ ನಿರ್ಮಾಣವಾಗದೇ ಇನ್ನೂ ಕಾಮಗಾರಿ ಬಾಕಿ ಉಳಿದಿರುವ ರಾಜ್ಯದ ಗ್ರಾಮ ಪಂಚಾಯಿತಿಗಳಾವುವು; ಶೌಚಾಲಯಗಳನ್ನೇ ನಿರ್ಮಾಣ ಮಾಡದೇ ಶೇಕಡ ೧೦೦ ರಷ್ಟು ಗುರಿ ಸಾಧಿಸಿದೆ ಎಂದು ಮಾಹಿತಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರ ಕುರಿತು ಸರ್ಕಾರದ ಕ್ರಮಗಳೇನು ; (ವಿವರ ನೀಡುವುದು)

(ಈ) ಬಾಕಿಯಿರುವ ಶೌಚಾಲಯ ಕಾಮಗಾರಿಗಳನ್ನು ಯಾವ ನಿಗಧಿತ ಅವಧಿಯೊಳಗೆ ಸಂಪೂರ್ಣಗೊಳಿಸಲಾಗುವುದು; ಪ್ರಸ್ತುತ ಶೌಚಾಲಯ ನಿರ್ಮಾಣ ಬಾಕಿಯಿರಲು ಕಾರಣಗಳೇನು ?

## ಕೊಡಗು ಜಿಲ್ಲೆಯ ಪ್ರವಾಸಿ ಸ್ಥಳಗಳಿಗೆ ಸಾರಿಗೆ ಸಂಪರ್ಕ ಕಲ್ಪಿಸುವ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨ (೦೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿರುವ ಪ್ರವಾಸೋದ್ಯಮ, ಪ್ರವಾಸಿ ಸ್ಥಳಗಳಾದ ಶ್ರೀಕ್ಷೇತ್ರ ತಲಕಾವೇರಿ, ಅಬ್ಬಿಫಾಲ್ಸ್, ಇರ್ಪು ಫಾಲ್ಸ್, ನಾಗರಹೊಳೆ, ದುಬಾರೆ, ಚೇಲಾವರಫಾಲ್ಸ್ ಮತ್ತು ನಾಲ್ಕುನಾಡು ಅರಮನೆ ಮುಂತಾದ ಸ್ಥಳಗಳಿಗೆ ಹೋಗಲು ಸಾರಿಗೆ ವ್ಯವಸ್ಥೆಯನ್ನು ಮಾಡಲಾಗಿದೆಯೇ ;

(ಆ) ಮಾಡಲಾಗಿದ್ದಲ್ಲಿ, ಯಾವ ಯಾವ ನಿಗಧಿತ ಸಮಯಕ್ಕೆ ಸರ್ಕಾರಿ ಸಾರಿಗೆ ವ್ಯವಸ್ಥೆ ಕಲ್ಪಸಲಾಗಿದೆ ; (ಮಾಹಿತಿ ನೀಡುವುದು)

(ಇ) ಕೊಡಗಿನ ಪ್ರವಾಸಿ ಸ್ಥಳಗಳಲ್ಲಿ ಕೆಲವು ಸ್ಥಳಗಳಿಗೆ ಸಾರಿಗೆ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸಾರಿಗೆ ವ್ಯವಸ್ಥೆ ಕಲ್ಪಿಸಲು ಇಲಾಖೆಯ ನಿಲುವೇನು ?

## ಕೊಡಗು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩ (೧೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; ಅವುಗಳಿರುವ ಸ್ಥಳಗಳ ಹೆಸರಿನೊಂದಿಗೆ ಅಲ್ಲಿರುವ ಸಿಬ್ಬಂದಿಗಳ ವಿವರ ಹಾಗೂ ಖಾಲಿ ಇರುವ ಹುದ್ದೆಗಳ ವಿವರಗಳನ್ನು ನೀಡುವುದು;

(ಆ) ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಆರೋಗ್ಯ ಇಲಾಖೆಯಲ್ಲಿರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳ ವಿವರ ನೀಡುವುದು; ಜಿಲ್ಲೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರದ ಕ್ರಮಗಳೇನು ? (ವಿವರ ನೀಡುವುದು)

## ಆಯುಷ್ ಇಲಾಖೆ ಕಟ್ಟಡ ಕಾಮಗಾರಿ ಹಾಗೂ ಸಿಬ್ಬಂದಿ ಕುರಿತು

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೪ (೮೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦–೧೧ರಿಂದ ೨೦೧೭–೧೮ನೇ ಸಾಲಿನವರೆಗೆ ಆಯುಷ್ ಇಲಾಖೆಯಲ್ಲಿ ವಿವಿಧ ಲೆಕ್ಕಶೀರ್ಷಿಕೆಗಳಲ್ಲಿ ಪ್ರತಿ ವರ್ಷ ಕಟ್ಟಡ ಕಾಮಗಾರಿಗೆ ಮತ್ತು ಕಟ್ಟಡ ನವೀಕರಣ ಹಾಗೂ ದುರಸ್ತಿ ಕಾಮಗಾರಿಗೆ ಬಿಡುಗಡೆಯಾದ ಅನುದಾನವೆಷ್ಟು; ಅದರಲ್ಲಿ ಮಾಡಲಾದ ವೆಚ್ಚವೆಷ್ಟು ಹಾಗೂ ಉಳಿತಾಯದ ಅನುದಾನವೆಷ್ಟು;

(ಆ) ಈ ಅವಧಿಯಲ್ಲಿ ಹೊಸ ಕಟ್ಟಡ ಕಾಮಗಾರಿಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡದ ಅಂದಾಜು ವೆಚ್ಚವೆಷ್ಟು; ಕಾಮಗಾರಿ ಪೂರ್ಣಗೊಂಡಾಗ ತಗುಲಿದ ವೆಚ್ಚವೆಷ್ಟು; ಒಟ್ಟು ವೆಚ್ಚದ ವ್ಯತ್ಯಾಸವೆಷ್ಟು ; ಶೇಕಡವಾರು ಏರಿಕೆ ಎಷ್ಟು ;

(ಇ) ಈ ಅವಧಿಯಲ್ಲಿ ಆಯುಷ್ ಇಲಾಖೆಯ ಅನುದಾನದಲ್ಲಿ ಕಟ್ಟಡ ಕಾಮಗಾರಿಗಳಿಗೆ ಮತ್ತು ದುರಸ್ತಿಗೆ ಮಾಡಲಾದ ಒಟ್ಟು ವೆಚ್ಚವೆಷ್ಟು; ಹಾಗೂ ಲೋಕೋಪಯೋಗಿ ಇಲಾಖೆಯ ಅನುದಾನದಲ್ಲಿ ಮಾಡಲಾದ ಒಟ್ಟು ವೆಚ್ಚವೆಷ್ಟು ; (ಸಂಸ್ಥೆವಾರು ವಿವರ ನೀಡುವುದು)

(ಈ) ಆಯುಷ್ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ನೌಕರರುಗಳ ಸಂಖ್ಯೆ ಎಷ್ಟು; ೨೦೧೦–೧೧ ರಿಂದ ೨೦೧೬–೧೭ನೇ ಸಾಲಿನವರೆವಿಗೆ ತರಬೇತಿ ಪಡೆದ ಅಧಿಕಾರಿ/ ನೌಕರರ ಸಂಖ್ಯೆ ಎಷ್ಟು; ತರಬೇತಿಗೆ ತಗುಲಿದ ವೆಚ್ಚ ಎಷ್ಟು; ತರಬೇತಿ ನೀಡಲು ಕಟ್ಟಡದ ಕೊರತೆ ಇದೆಯೇ ;

(ಉ) ತರಬೇತಿ ಕೇಂದ್ರದ ಕಟ್ಟಡ ಕಟ್ಟಲು ಪ್ರಸ್ತಾವನೆ ಸಲ್ಲಿಸಿದ್ದು ಯಾರು; ಮೊದಲು ಎಲ್ಲಿ ತರಬೇತಿ ಕೇಂದ್ರ ಕಟ್ಟಲು ಸರ್ಕಾರಿ ಮಂಜೂರಾತಿ ನೀಡಿದೆ; ನಂತರ ತರಬೇತಿ ಕೇಂದ್ರದ ಕಟ್ಟಡವನ್ನು ಎಲ್ಲಿ ಕಟ್ಟಲಾಗಿದೆ; ಇದನ್ನು ಕಟ್ಟಲು ಆಡಳಿತಾತ್ಮಕ ಅಂದಾಜು ವೆಚ್ಚ ಮತ್ತು ಕಟ್ಟಡ ನಿರ್ಮಾಣದ ಪೂರ್ಣ ವೆಚ್ಚವೆಷ್ಟು; ಮೂಲ ಸೌಲಭ್ಯ ಕಲ್ಪಿಸಲು ಮಾಡಲಾದ ವೆಚ್ಚ ಎಷ್ಟು; ಎಂದಿನಿಂದ ತರಬೇತಿ ಪ್ರಾರಂಭಿಸಲಾಗುತ್ತದೆ ಮತ್ತು ವಾರ್ಷಿಕವಾಗಿ ಎಷ್ಟು ಜನರಿಗೆ ತರಬೇತಿ ನೀಡಲಾಗುತ್ತದೆ ;

(ಊ) ಈ ತರಬೇತಿ ಕೇಂದ್ರ ನಿರ್ವಹಣೆ ಮಾಡಲು ಮಂಜೂರಾದ ಹುದ್ದೆಗಳಿಗೆ ವೇತನ ಮತ್ತು ವೇತನೇತರ ವೆಚ್ಚಗಳಿಗೆ ತಗಲುವ ವೆಚ್ಚ ಎಷ್ಟು; ಸರ್ಕಾರದ ಇಷ್ಟು ಅಗಾದ ಹಣದ ವೆಚ್ಚದಿಂದ ಸಾರ್ವಜನಿಕರಿಗೆ ಮತ್ತು ಅಧಿಕಾರಿ ನೌಕರರಿಗೆ ಆಗುವ ಪ್ರಯೋಜನವೇನು ?

# ಆಯುಷ್ ಇಲಾಖೆಯಲ್ಲಿನ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ ಯೋಜನೆಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೫ (೮೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦–೧೧ನೇ ಸಾಲಿನಿಂದ ೨೦೧೬–೧೭ನೇ ಸಾಲಿನವರೆಗೆ ಆಯುಷ್ ನಿರ್ದೇಶನಾಲಯದಲ್ಲಿ ಮತ್ತು ಅಧೀನ ಸಂಸ್ಥೆಗಳಲ್ಲಿ ಪ್ರತಿ ವರ್ಷ ಖರೀದಿಸಿದ ಕಂಪ್ಯೂಟರ್, ಲ್ಯಾಪ್‌ಟಾಪ್, ಜೆರಾಕ್ಸ್ ಯಂತ್ರ, ಪ್ರಿಂಟರ್ ಮತ್ತು ಯು.ಪಿ.ಎಸ್.ಗಳ ಸಂಖ್ಯೆ ಎಷ್ಟು ಮತ್ತು ಅವುಗಳ ಖರೀದಿಗೆ ತಗುಲಿದ ವೆಚ್ಚವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ೨೦೧೦–೧೧ರಿಂದ ೨೦೧೬–೧೭ನೇ ಸಾಲಿನವರೆಗೆ ಆಯುಷ್ ಇಲಾಖೆಯಲ್ಲಿ ಪ್ರತಿ ವರ್ಷ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆಯಡಿ ಬಿಡುಗಡೆಯಾದ ಅನುದಾನ ಎಷ್ಟು; ವೆಚ್ಚ ಮಾಡಲಾದ ಅನುದಾನ ಎಷ್ಟು ; ಉಳಿತಾಯವಾದ ಅನುದಾನ ಎಷ್ಟು; ಬಳಕೆಯಾದ ಅನುದಾನವನ್ನು ಯಾವ ಕಾರ್ಯಕ್ರಮಗಳಿಗೆ ವೆಚ್ಚ ಮಾಡಲಾಗಿದೆ ವಿವರ ನೀಡುವುದು)

(ಇ) ೨೦೧೦–೧೧ರಿಂದ ೨೦೧೬–೧೭ನೇ ಸಾಲಿನವರೆಗೆ ಆಯುಷ್ ಇಲಾಖೆಯಲ್ಲಿ ಪ್ರತಿ ವರ್ಷ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆಯಡಿ ಖರೀದಿಸಿದ ಲ್ಯಾಪ್‌ಟಾಪ್‌ಗಳು ಮತ್ತು ಔಷಧಿ ಕಿಟ್‌ಗಳ ಸಂಖ್ಯೆ ಎಷ್ಟು ; ಅವುಗಳ ಖರೀದಿಗೆ ಮಾಡಿದ ವೆಚ್ಚವೆಷ್ಟು ; (ವಿವರ ನೀಡುವುದು)

(ಈ) ಎಸ್.ಸಿ.ಪಿ ಮತ್ತು ಟಿ.ಎಸ್.ಪಿ. ಯೋಜನೆಯಡಿ ಖರೀದಿಸಿದ ಲ್ಯಾಪ್‌ಟಾಪ್ ಮತ್ತು ಔಷಧಿ ಕಿಟ್‌ಗಳ ಗುಣಮಟ್ಟದ ಬಗ್ಗೆ ಮತ್ತು ಹಣದ ಅವ್ಯವಹಾರದ ಬಗ್ಗೆ ದೂರುಗಳು ಸ್ವೀಕೃತಯಾಗಿದೆಯೇ; ಸ್ವೀಕೃತವಾಗಿದ್ದಲ್ಲಿ ತನಿಖೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಏನು ಕ್ರಮ ಜರುಗಿಸಲಾಗಿದೆ ; (ವಿವರ ನೀಡುವುದು)

(ಉ) ೨೦೧೦–೧೧ರಿಂದ ೨೦೧೬–೧೭ನೇ ಸಾಲಿನವರೆಗೆ ಆಯುಷ್ ಇಲಾಖೆಯಲ್ಲಿ ಪ್ರತಿ ವರ್ಷ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆಯಡಿ ಕಂಪ್ಯೂಟರ್ ಮತ್ತು ಔಷಧಿ ಕಿಟ್‌ಗಳ ವಿತರಣೆಯಿಂದ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ?

## ಆಯುಷ್ ಇಲಾಖೆಯ ಲಿಪಿಕ ನೌಕರರ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೬ (೮೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಯುಷ್ ಇಲಾಖೆಯ ಲಿಪಿಕ ವೃಂದದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳೂ ಸರ್ಕಾರಿ ಸೇವೆಗೆ ಸೇರಿದ ದಿನಾಂಕದಿಂದ ೩೦ ವರ್ಷಗಳಿಗೆ ಮೇಲ್ಪಟ್ಟು ಬೆಂಗಳೂರು ನಗರದಲ್ಲಿಯೇ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; ಇವರುಗಳು ಬೆಂಗಳೂರಿನಲ್ಲಿಯೇ ಕಾರ್ಯ ನಿರ್ವಹಿಸಲು ಕಾರಣಗಳೇನು ; (ವಿವರ ನೀಡುವುದು)

(ಆ) ಆಯುಷ್ ಇಲಾಖೆಯ ಲಿಪಿಕ ವೃಂದದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಮೂರು ಪದೋನ್ನತಿ

ಪಡೆದ ನಂತರವು ಬೆಂಗಳೂರಿನಲ್ಲಿಯೇ ಸೇವೆ ಸಲ್ಲಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಆಯುಷ್ ಇಲಾಖೆಯ ಲಿಪಿಕ ವೃಂದದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಮೇಲಿನ ಹುದ್ದೆಗೆ ಪದೋನ್ನತಿ ಪಡೆದ ನಂತರವು ಅದೇ ಹುದ್ದೆ/ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವವರ ವಿವರ ನೀಡುವುದು ;

(ಈ) ಆಯುಷ್ ನಿರ್ದೇಶನಾಲಯದ ಆಯವ್ಯಯ ವಿಭಾಗದ ಅಧೀಕ್ಷಕರು ಅದೇ ಸ್ಥಳದಲ್ಲಿ ಎಷ್ಟು ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ; ಇವರಿಗೆ ಪದೋನ್ನತಿ ನೀಡಲು ಸಹಾಯಕ ಆಡಳಿತ ಹುದ್ದೆಯನ್ನು ಬೇರೆ ಕಛೇರಿಯಿಂದ ಸ್ಥಳಾಂತರಿಸಿ ಅವರಿಗೆ ಪದೋನ್ನತಿ ನೀಡಿ ಅವರನ್ನು ಅದೇ ಹುದ್ದೆಯಲ್ಲಿ ಮುಂದುವರಿಸಲಾಗಿದೆಯೇ; ಇದ್ದಲ್ಲಿ ಕಾರಣಗಳೇನು ;

(ಉ) ಕಳೆದ ಐದು ವರ್ಷಗಳಿಂದ ಕೌನ್ಸಿಲಿಂಗ್ ಮುಖಾಂತರ ವರ್ಗಾವಣೆಯಾದ ಲಿಪಿಕ ನೌಕರರ ಸಂಖ್ಯೆ ಎಷ್ಟು; ಕೌನ್ಸಿಲಿಂಗ್ ಹೊರತುಪಡಿಸಿ ವರ್ಗಾವಣೆಯಾದ ಲಿಪಿಕ ನೌಕರರ ಸಂಖ್ಯೆ ಎಷ್ಟು; ಅವಧಿ ಪೂರ್ಣಗೊಳ್ಳದ ವರ್ಗಾವಣೆಯಾದ ನೌಕರರ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಸಾರಿಗೆ ಇಲಾಖೆಯಲ್ಲಿನ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೭ (೯೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರಿಗೆ ಇಲಾಖೆಯಲ್ಲಿ ಆರ್.ಟಿ.ಓ ನಲ್ಲಿ ಮಂಜೂರಾಗಿರುವ ವಿವಿಧ ಹಂತದ ಹುದ್ದೆಗಳ ಸಂಖ್ಯೆ ಎಷ್ಟು; ಇದರಲ್ಲಿ ಭರ್ತಿಯಾದ, ಖಾಲಿಯಾದ ಹುದ್ದೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸಾರಿಗೆ ಇಲಾಖೆ (KSRTC & BMTC) ಯಲ್ಲಿ Diploma in mechanical Engineering & B.E In mechanical Engineering ಮಾಡಿದವರಿಗೆ ಯಾವ ಯಾವ ಹುದ್ದೆಗಳು ಮಂಜೂರಾಗಿವೆ; ಇದರಲ್ಲಿ ಖಾಲಿಯಿರುವ ಹುದ್ದೆಗಳೆಷ್ಟು; (ಜಿಲ್ಲಾವಾರು ಖಾಲಿ ಹುದ್ದೆಗಳ ಮಾಹಿತಿ ನೀಡುವುದು)

(ಇ) ಈ ಖಾಲಿ ಹುದ್ದೆಗಳನ್ನು ಯಾವಾಗ ನೇಮಕಾತಿ ಮಾಡಲಾಗುವುದು ?

## ಆರೋಗ್ಯ ಕರ್ನಾಟಕ ಯೋಜನೆ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿರುವವರು) :–**

೫೮ (೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಆರೋಗ್ಯ ಕರ್ನಾಟಕ ಯೋಜನೆ" ಯು ಹಿಂದಿನ ಸರ್ಕಾರದ ಭಾಗ್ಯಗಳಲ್ಲೊಂದಾಗಿದ್ದು, ಈ ಯೋಜನೆಯನ್ನು ಮುಂದುವರಿಸಲಾಗುವುದೇ ;

(ಆ) ಈ ಯೋಜನೆಯಡಿಯಲ್ಲಿ ಎಷ್ಟು ಸರ್ಕಾರಿ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ ;

(ಇ) ಈ ಯೋಜನೆಯಡಿಯಲ್ಲಿ ಎಷ್ಟು ಜನರಿಗೆ ಆರೋಗ್ಯ ಸೇವೆ ದೊರೆತಿದೆ ;

(ಈ) ಬಿ.ಪಿ.ಎಲ್. ಕಾರ್ಡ್‌ದಾರರಿಗೆ ಹಾಗೂ ಎ.ಪಿ.ಎಲ್, ಕಾರ್ಡ್‌ದಾರರಿಗೆ ಶೇ.೩೦ ಹಾಗೂ ಸಂಪೂರ್ಣವಾಗಿ ಉಚಿತ ಚಿಕಿತ್ಸೆ ಎಲ್ಲೆಲ್ಲಿ ನೀಡಲಾಗುತ್ತಿದೆ ?

## ಕೊಡಗು ಜಿಲ್ಲೆಯಲ್ಲಿನ ಡಯಾಲಿಸಿಸ್ ಕೇಂದ್ರಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯ (೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಡಯಾಲಿಸಿಸ್ ಕೇಂದ್ರಗಳ ಸ್ಥಾಪನೆಗೆ ಸರ್ಕಾರ ನಿಗಧಿಪಡಿಸಿರುವ ಮಾನದಂಡ ಹಾಗೂ ನಿಯಮಗಳೇನು ; (ಪೂರ್ಣ ವಿವರ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಡಯಾಲಿಸಿಸ್ ಕೇಂದ್ರಗಳ ಸಂಖ್ಯೆ ಎಷ್ಟು; ಹಾಗೂ ಯಾವುವು; ಈ ಕೇಂದ್ರಗಳಿಗೆ ನಿಯೋಜಿಸಿರುವ ಸಿಬ್ಬಂದಿಗಳೆಷ್ಟು ;

(ಇ) ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳ ಪ್ರಕಾರ ಜನಸಂಖ್ಯೆಗೆ ಅನುಗುಣವಾಗಿ ಕೊಡಗು ಜಿಲ್ಲೆಯಲ್ಲಿ ಡಯಾಲಿಸಿಸ್ ಕೇಂದ್ರಗಳು ಸ್ಥಾಪನೆಯಾಗಿವೆಯೇ; ಹಾಗೂ ಅವು ಕಾರ್ಯ ನಿರ್ವಹಿಸುತ್ತಿವೆಯೇ ;

(ಈ) ಕೊಡಗು ಜಿಲ್ಲೆಯಲ್ಲಿ ಜನಸಂಖ್ಯೆಗನುಗುಣವಾಗಿ ಸದರಿ ಕೇಂದ್ರಗಳ ಸ್ಥಾಪನೆಯಾಗದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸ್ಥಾಪಿಸಲಾಗುವುದು ?

## ಕೊಡಗು ಜಿಲ್ಲೆಯ ಮಡಿಕೇರಿಯಿಂದ ಕರಿಕೆ ಮುಖಾಂತರ

## ಕಾಸರಗೋಡಿಗೆ ಸರ್ಕಾರಿ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೦ (೭೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಮಡಿಕೇರಿ–ಮೂರ್ನಾಡು–ನಾಪೋಕ್ಲು–ಎಮ್ಮೆಮಾಡು ಭಾಗಮಂಡಲ–ಕರಿಕೆ ಪಾಣತ್ತೂರು–ಕಾಸರಗೋಡು ಈ ಮಾರ್ಗದಲ್ಲಿ ಸೂಕ್ತ ಸರ್ಕಾರಿ ಬಸ್ ಸಂಚಾರ ವ್ಯವಸ್ಥೆ ಇಲ್ಲದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸದರಿ ಮಾರ್ಗದಲ್ಲಿ ಸಾಕಷ್ಟು ಸರ್ಕಾರಿ ಬಸ್ಸುಗಳು ಸಂಚರಿಸುವಂತೆ ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ?

## ಕೊಡಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕಿನ ಈಚಲಪುರ ಮತ್ತು ಕ್ಲಾತೆ ಗ್ರಾಮದ ಸಂಪರ್ಕ ರಸ್ತೆ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೧ (೭೮ ಮತ್ತು ೭೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆ, ಸೋಮವಾರಪೇಟೆ ತಾಲ್ಲೂಕಿನಲ್ಲಿ ಹೇಮಾವತಿ ಹಿನ್ನೀರಿನ ಮುಳುಗಡೆ ಪ್ರದೇಶದಲ್ಲಿ ಬರುವ ಈಚಲಪುರ ಮತ್ತು

ಕ್ಲಾತೆ ಗ್ರಾಮದ ಸಂಪರ್ಕ ರಸ್ತೆ ಹಾಗೂ ಮಲ್ಲಿಕಾರ್ಜುನ ದೇವಸ್ಥಾನದಿಂದ ಊರು ಗುತ್ತಿಗೆ ಹೋಗುವ ರಸ್ತೆಯು ತುಂಬಾ ಹಾಳಾಗಿರುವುದರಿಂದ ಸದರಿ ರಸ್ತೆಯ ಮೂಲಕವೇ ಮೊರಾರ್ಜಿ ದೇಸಾಯಿ ಶಾಲೆಗೆ ಓಡಾಡುವ ಮಕ್ಕಳು ಹಾಗೂ ಪೋಷಕರಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ರಸ್ತೆಯನ್ನು ವಿಶೇಷ ರಸ್ತೆಯೆಂದು ಪರಿಗಣಿಸಿ ಕಾವೇರಿ ನೀರಾವರಿ ನಿಗಮದ ವತಿಯಿಂದ ಕಾಂಕ್ರೀಟ್ ರಸ್ತೆಯನ್ನಾಗಿ ಮಾರ್ಪಾಡಿಸಿ ಸಾರ್ವಜನಿಕರಿಗೆ ಆಗಿರುವ ತೊಂದರೆಯನ್ನು ನಿವಾರಿಸಲಾಗುವುದೇ ?

## ಬೀದರ್ ಜಿಲ್ಲೆ ಮೆಡಿಕಲ್ ಕಾಲೇಜಿನ ಮೂಲಸೌಲಭ್ಯದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨ (೬೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಮೆಡಿಕಲ್ ಕಾಲೇಜಿನ ನೂತನ ಕಟ್ಟಡದಲ್ಲಿ ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗಿದೆ ; ಇನ್ನೂ ಯಾವ ಯಾವ ಸೌಲಭ್ಯಗಳನ್ನು ಉಪಕರಣಗಳನ್ನು ಅಳವಡಿಸಬೇಕಾಗಿದೆ;

(ಆ) ನೂತನ ಕಟ್ಟಡ ನಿರ್ಮಾಣ ಹಾಗೂ ಅಳವಡಿಸಲಾಗಿರುವ ಪೀಠೋಪಕರಣ ವೈದ್ಯಕೀಯ ಉಪಕರಣಗಳಿಂದಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ ; (ಮಾಹಿತಿ ನೀಡುವುದು)

(ಇ) ಬೀದರ್ ಮೆಡಿಕಲ್ ಕಾಲೇಜಿನ ಅಂತಿಮ ವರ್ಷದ ಫಲಿತಾಂಶ ಅತಿ ಕಡಿಮೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಫಲಿತಾಂಶ ಸುಧಾರಣೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

## ಬಜಾವತ್ ಆಯೋಗದ ತೀರ್ಪಿನಂತೆ ಮಾಂಜ್ರಾ ನದಿ ನೀರಿನ ಬಳಕೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩ (೬೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಜಾವತ್ ಆಯೋಗದ ತೀರ್ಪಿನಂತೆ ನೀರು ಬಳಸಿಕೊಳ್ಳಲು ಮಾಂಜ್ರಾ ನದಿಯಲ್ಲಿ ಎಷ್ಟು ಬ್ಯಾರೇಜುಗಳನ್ನು ನಿರ್ಮಿಸಲಾಗಿದೆ; ಪ್ರತಿ ಬ್ಯಾರೇಜಿನ ನೀರಿನ ಸಂಗ್ರಹ ಸಾಮರ್ಥ್ಯ, ನಿರ್ಮಾಣದ ವೆಚ್ಚದ ಮಾಹಿತಿ ನೀಡುವುದು ;

(ಆ) ಮೂಲ ಉದ್ದೇಶಕ್ಕೆ ಅನುಗುಣವಾಗಿ ಈ ಬ್ಯಾರೇಜುಗಳಿಂದ ನೀರಾವರಿ ನೀರು ಬಳಕೆಯಾಗುತ್ತಿದೆಯೇ ;

(ಇ) ಮಾಂಜ್ರಾ ಸರಣಿ ಬ್ಯಾರೇಜುಗಳಲ್ಲಿನ ಗೇಟು ಸಮಸ್ಯೆಯಿಂದಾಗಿ ನೀರು ಸೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಕಾರಂಜಾ ಜಲಾಶಯಕ್ಕೆ ಹರಿದು ಬರುವ ನೀರಿನ ಪ್ರಮಾಣದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೪ (೭೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರಂಜಾ ಜಲಾಶಯಕ್ಕೆ ಹರಿದು ಬರುವ ನೀರಿನ ಪ್ರಮಾಣ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಾರಂಜಾ ಯೋಜನೆಯ ಜಲಾನಯನ ಪ್ರದೇಶದ ವ್ಯಾಪ್ತಿಯಲ್ಲಿ ತೆಲಂಗಾಣದ ಕೊತ್ತೂರು ಬಳಿಯ ಬ್ಯಾರೇಜಿನಲ್ಲಿ ನೀರು ನಿಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕೊತ್ತೂರು ಬ್ಯಾರೇಜಿನಲ್ಲಿ ನೀರನ್ನು ನಿಲ್ಲಿಸುವುದರಿಂದ ಕಾರಂಜಾ ಜಲಾಶಯದ ಒಳಹರಿವು ಕಡಿಮೆಯಾಗಿ ನೀರಾವರಿ ಉದ್ದೇಶಕ್ಕೆ ಅಡ್ಡಿಯಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗೋದಾವರಿ ಜಲಾಯನಕ್ಕೆ ಸಂಬಂಧಿಸಿದಂತೆ ಬಚಾವತ್ ಆಯೋಗದ ತೀರ್ಪಿನ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫ (೭೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗೋದಾವರಿ ಜಲಾಯನಕ್ಕೆ ಸಂಬಂಧಿಸಿದಂತೆ ಬಚಾವತ್ ಆಯೋಗ ತೀರ್ಪು ನೀಡಿದ್ದು ಯಾವಾಗ ; (ವಿವರ ನೀಡುವುದು)

(ಆ) ಬಚಾವತ್ ಆಯೋಗದ ತೀರ್ಪಿನಂತೆ ಬೀದರ್ ಜಿಲ್ಲೆಗೆ ಹಂಚಿಕೆಯಾದ ನೀರಿನ ಪ್ರಮಾಣ ಎಷ್ಟು ;

(ಇ) ಬೀದರ್ ಜಿಲ್ಲೆಗೆ ಹಂಚಿಕೆಯಾದ ನೀರನ್ನು ಬಳಸಿಕೊಳ್ಳಲು ಯಾವ ಯಾವ ಯೋಜನೆ ರೂಪಿಸಲಾಗಿದೆ ; (ಪ್ರತಿ ಯೋಜನೆಯ ನೀರು ಬಳಕೆ ಸಾಮರ್ಥ್ಯ, ನಿರ್ಮಾಣ ವೆಚ್ಚ,ಯೋಜನೆಯ ಸದ್ಯದ ಮಾಹಿತಿ ನೀಡುವುದು)

(ಈ) ಹಂಚಿಕೆಯಾದ ನೀರಿನ ಪೈಕಿ ಎಷ್ಟು ನೀರು ಬಳಸಿಕೊಳ್ಳಲು ಯೋಜನೆ ರೂಪಿಸಲಾಗಿದೆ ; ಇನ್ನೂ ಎಷ್ಟು ಯೋಜನೆಗಳನ್ನು ರೂಪಿಸಬೇಕಾಗಿದೆ ? (ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದ ಬೀದರ್ ಜಿಲ್ಲೆಯ ಸಾರಿಗೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬ (೭೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ಬೀದರ್ ಜಿಲ್ಲೆಯ ಸಾರಿಗೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳ ನೇಮಕಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಬೀದರ್ ಜಿಲ್ಲೆಯಲ್ಲಿ ಬಸ್ಸುಗಳ ಕೊರತೆಯಿಂದ ನೂರಾರು ಗ್ರಾಮದಲ್ಲಿ ಬಸ್ಸು ಸಂಚರಿಸುತ್ತಿಲ್ಲವೆನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಬೀದರ್ ಜಿಲ್ಲೆಯಲ್ಲಿ ಸಂಚರಿಸುವ ಬಸ್ಸುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಬೀದರ್ ಜಿಲ್ಲೆಯಲ್ಲಿನ ಮಿನಿ ಬಸ್ ನಿಲ್ದಾಣಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಉ) ನಿರ್ಮಾಣಗೊಂಡಿರುವ ಬಸ್ ನಿಲ್ದಾಣಗಳು ಉಪಯೋಗಕ್ಕೆ ಬಾರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

## ಹೆಗ್ಗಡದೇವನಕೋಟೆ ತಾಲ್ಲೂಕು ಭೀಮನಕೊಲ್ಲಿ–ಜಾಗನಕೋಟೆ ರಸ್ತೆಯನ್ನು ದುರಸ್ತಿಪಡಿಸುವ ಕುರಿತು

**ಶ್ರೀ ಸಂದೇಶ್ ನಾಗರಾಜ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭ (೪೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೆಗ್ಗಡದೇವನಕೋಟೆ ತಾಲ್ಲೂಕು, ಬೇಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಭೀಮನಕೊಲ್ಲಿಯಿಂದ ಕಾಡಂಚಿನ ಗ್ರಾಮಗಳಾದ ಕಾಳಯ್ಯನಹಳ್ಳ ಮತ್ತು ಜಾಗನಕೋಟೆಗೆ ತೆರಳುವ ರಸ್ತೆಯು ಕೊರಕಲು ಬಿದ್ದು ಮಳೆಗಾಲದಲ್ಲಿ ಕೆಸರುಮಯವಾಗಿದ್ದು, ಸಾರ್ವಜನಿಕರ ಓಡಾಟಕ್ಕೆ ಬಹಳ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಗ್ರಾಮಗಳಲ್ಲಿ ದಲಿತರು, ಬುಡಕಟ್ಟು ಜನರು ವಾಸ ಮಾಡುತ್ತಿದ್ದು, ಈ ರಸ್ತೆಯನ್ನು ೧೯೮೧ ರಲ್ಲಿ ಮೆಟ್ಲಿಂಗ್ ಮಾಡಿದ್ದು, ಅಲ್ಲಿಂದ ಈಚೆಗೆ ಡಾಂಬರೀಕರಣ ಮಾಡದೇ ಇರುವ ಕಾರಣ ಹದಗೆಟ್ಟಿರುವ ಈ ರಸ್ತೆಯನ್ನು ಪೂರ್ಣವಾಗಿ ದುರಸ್ತಿಗೊಳಿಸಿ ಡಾಂಬರೀಕರಣ ಮಾಡುವ ಮೂಲಕ ಸಾರ್ವಜನಿಕರ ಸಂಚಾರಕ್ಕೆ ಅನುಕೂಲ ಮಾಡಿಕೊಡಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಗ್ರಾಮ ಪಂಚಾಯತಿ ನೌಕರರನ್ನು ಇ.ಎಫ್.ಎಂ.ಎಸ್. ವ್ಯಾಪ್ತಿಗೆ ತರುವ ಬಗ್ಗೆ

**ಶ್ರೀ ಸಂದೇಶ್ ನಾಗರಾಜ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮ (೪೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸುಮಾರು ೫೧,೧೧೪ ನೌಕರರನ್ನು ಇ.ಎಫ್.ಎಮ್.ಎಸ್. ವ್ಯಾಪ್ತಿಗೆ ಸೇರ್ಪಡೆಗೊಳಿಸಲು ಕ್ರಮ ಜರುಗಿಸಲಾಗುವುದೇ; ಈ ಬಗ್ಗೆ ಸರ್ಕಾರಿ ಆದೇಶ ಹೊರಡಿಸಿದ್ದರೂ ಅದು ಇನ್ನೂ ಕಾರ್ಯಗತವಾಗದಿರಲು ಕಾರಣಗಳೇನು ; ಸ್ಥಳೀಯ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಉಳಿಕೆ ಸುಮಾರು ೧೭,೦೦೦ ನೌಕರರನ್ನೂ ಕೂಡ ಆರ್.ಡಿ.ಪಿ.ಆರ್. ಇಲಾಖೆಯ ವ್ಯಾಪ್ತಿಗೆ ತರಲು ಕ್ರಮ ಜರುಗಿಸಲಾಗುವುದೇ ;

(ಆ) ೧೦ ವರ್ಷ ಸೇವೆ ಸಲ್ಲಿಸಿದ ಬಿಲ್ ಕಲೆಕ್ಟರ್‌ಗಳಿಗೆ ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ ಆಧಾರದ ಮೇಲೆ ಸೆಕ್ರೆಟರಿ ಗ್ರೇಡ್– ೨ ಹುದ್ದೆಗೆ ಬಡ್ತಿ ನೀಡುವ ಬಗ್ಗೆ ಪರಿಶೀಲಿಸಲಾಗುವುದೇ;

(ಇ) ಜನಗಣತಿ ಆಧಾರದ ಮೇಲೆ ಎಷ್ಟು ಗ್ರಾಮ ಪಂಚಾಯತಿಗಳನ್ನು ಗ್ರೇಡ್–೨ ರಿಂದ ಗ್ರೇಡ್ ೧ಕ್ಕೆ ಮೇಲ್ದರ್ಜೆಗೆ ಏರಿಸಲು ಸರ್ಕಾರ ಉದ್ದೇಶಿಸಲಾಗಿದೆ ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0132/800 ಪ್ರತಿಗಳು/5–07–2018